ವಿಜಯಪುರ | ಸಂಪುಟ 04 | ಸಂಚಿಕೆ 039 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ


ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ರವಿವಾರ, ಮಾರ್ಚ್, 29, 2026

"ಕಳೆದ ಹಲವು ದಶಕಗಳಿಂದ ದೇಶದಲ್ಲೇ ಮಾದರಿ ಶಿಕ್ಷಣದಲ್ಲಿ ತ್ರಿಭಾಷಾ ನೀತಿ ಹೊಂದಿರುವ ಕರ್ನಾಟಕದಲ್ಲಿ ಯಾವುದೇ ಪೂರ್ವಾಪರ ಚರ್ಚೆ, ಶಿಕ್ಷಣ ತಜ್ಞರ ಸಲಹೆ, ಪ್ರತಿಪಕ್ಷಗಳ ನಿಲುವು ಯಾವುದನ್ನು ಪರಿಗಣನೆಗೆ ತೆಗೆದುಕೊಳ್ಳದೆ ಏಕಾಏಕಿ ಹಿಂದಿ ಭಾಷೆ ಕೈ ಬಿಡುವ ನಿಲುವು ತೆಗೆದುಕೊಂಡಿರುವುದು ಆಘಾತಕಾರಿ ಬೆಳವಣಿಗೆ."



■ ಬಿ.ವೈ.ವಿಜಯೇಂದ್ರ
ಬಿಜೆಪಿ ರಾಜ್ಯಾಧ್ಯಕ್ಷರು

# ವಿಧಾನಸಭೆಯಲ್ಲಿ ಡಿಸಿಎಂ ಡಿಕೆಶಿ ವರ್ತನೆ ಸರಿಯಲ್ಲ: ಯತ್ನಾಳ

## ಉಪಮುಖ್ಯಮಂತ್ರಿ ಡಿಕೆ.ಶಿವಕುಮಾರ್ ವಿರುದ್ಧ ತೀವ್ರ ಕಿಡಿಕಾರಿದ ಶಾಸಕ ಬಸನಗೌಡ ಪಾಟೀಲ ಯತ್ನಾಳ್

■ ಉದಯರಶ್ಮಿ ದಿನಪತ್ರಿಕೆ

ಕೋಲಾರ: ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ವಿಧಾನಸಭೆ ಅಧಿವೇಶನದಲ್ಲಿ ಕೊತ್ವಾಲ್ ರಾಮಚಂದ್ರರೀತಿ ವರ್ತಿಸಿದ್ದಾರೆ ಎಂದು ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಅವರು ಆರೋಪಿಸಿದ್ದಾರೆ.

ಕೋಲಾರದಲ್ಲಿ ಶ್ರೀರಾಮ ಸೇನೆ ಆಯೋಜಿಸಿದ್ದ ರಾಮೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಭಾರಿ ಮೆರವಣಿಗೆಗೆ ಚಾಲನೆ ನೀಡಿದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಉಪಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರ ವಿರುದ್ಧ ತೀವ್ರವಾಗಿ ಕಿಡಿಕಾರಿದರು.



ವಿಧಾನಸಭೆಯಲ್ಲಿ ಡಿಕೆ ಶಿವಕುಮಾರ್ ಅವರ ವರ್ತನೆ ಸರಿಯಿಲ್ಲ ಎಂದು ಆರೋಪಿಸಿದ ಅವರು, "ಅವರ ನಡೆ ಕೊತ್ವಾಲ್ ರಾಮಚಂದ್ರ ಕಾಲವನ್ನು ನೆನಪಿಸುವಂತಿತ್ತು ಎಂದು ಹೇಳಿದ್ದಾರೆ.

ದಮ್ಮು, ತಾಕತ್ತಿನ ಬಗ್ಗೆ ಮಾತನಾಡುವ ಇಂತಹವರು ಮುಖ್ಯಮಂತ್ರಿ ಆದರೆ ಗತಿಯೇನು? ಡಿ.ಕೆ ಶಿವಕುಮಾರ್ ಅವರು ಸಿಎಂ ಆಗಬೇಕೆಂದು ನಮ್ಮವರನ್ನೂ ಭೇಟಿ ಮಾಡಿ ಚರ್ಚೆ ಮಾಡಿದ್ದು, ಕೇಂದ್ರದವರು ಒಪ್ಪದ ಕಾರಣ ಕಾಂಗ್ರೆಸ್‌ನಲ್ಲೇ ಇದ್ದುಕೊಂಡು ಹೋರಾಟ ಮಾಡುತ್ತಿದ್ದಾರೆ. ಬಿಜೆಪಿ ನನ್ನನ್ನು ಬೆಳೆಸಿದ ಪಕ್ಷವಾಗಿದ್ದು, ಹೀಗಾಗಿ ನಾನೆಂದೂ ಬಿಜೆಪಿಗನಾಗಿದ್ದು, ಯಡಿಯೂರಪ್ಪ ಮಾದರಿಯಲ್ಲಿ ಪಕ್ಷ ತೊರೆಯುವ ಮಾತೇ ಇಲ್ಲ ಎಂದು ತಿಳಿಸಿದರು.

ಬಳಿಕ ರಾಜ್ಯ ರಾಜಕೀಯ ಬೆಳವಣಿಗೆಗಳ ಬಗ್ಗೆ ಮಾತನಾಡಿದ ಅವರು, ಬಿಜೆಪಿ-ಜೆಡಿಎಸ್ ಮೈತ್ರಿ ಮುಂದುವರೆದರೆ ರಾಜ್ಯದಲ್ಲಿ ಅಧಿಕಾರಕ್ಕೆ ಬರುವುದು ಖಚಿತ. ಇದರಲ್ಲಿ ಯಾವುದೇ ಅನುಮಾನವಿಲ್ಲ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಇದೇ ವೇಳೆ ಮೇ ತಿಂಗಳಲ್ಲಿ ಚಿತ್ರದುರ್ಗದಲ್ಲಿ ಜಾಗೃತಿ ಹಿಂದೂ ಸಮಾಜೋತ್ಸವ ಕಾರ್ಯಕ್ರಮವನ್ನು ಆಯೋಜಿಸುತ್ತಿರುವುದಾಗಿ ಹೇಳಿದ ಅವರು, ಹಿಂದೂಗಳು ತಮ್ಮ ಮನಸ್ಥಿತಿಯನ್ನು ಬದಲಾಯಿಸಿ ಸಂಘಟಿತರಾಗಬೇಕು ಮತ್ತು ಎಲ್ಲಾ ಹಿಂದೂಗಳು ಒಂದಾಗಬೇಕು ಎಂದು ಕರೆ ನೀಡಿದರು



### ಯಾರಿಗೆ ಟಿಕೆಟ್ ಬೇಕೋ ಅವರು ಸ್ವತಃ ಖರೀದಿ ಮಾಡಿಕೊಳ್ಳಲಿ

ಇದೇ ವೇಳೆ ಐಪಿಎಲ್ ಟಿಕೆಟ್ ವಿವಾದ ಕುರಿತಂತೆ ಮಾತನಾಡಿದ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರು, ವಿಧಾನಸಭೆಯಲ್ಲಿ ಶಾಸಕರು ಜನರ ಸಮಸ್ಯೆಗಳ ಬಗ್ಗೆ ಚರ್ಚಿಸಬೇಕಾಗಿರುವಾಗ, ಐಪಿಎಲ್ ಟಿಕೆಟ್‌ಗಳಂತಹ ವಿಷಯಗಳನ್ನು ಎತ್ತಿಕೊಳ್ಳುವುದು ಸೂಕ್ತವಲ್ಲ ಎಂದು ಹೇಳಿದರು. ಕೆಲವರು ಮಾತ್ರ ಇಂತಹ ಬೇಡಿಕೆ ಮಾಡುತ್ತಿದ್ದಾರೆ. ಯಾರಿಗೆ ಟಿಕೆಟ್ ಬೇಕೋ ಅವರು ಸ್ವತಃ ಖರೀದಿ ಮಾಡಿಕೊಳ್ಳಲಿ. ಇದನ್ನು ಸಭೆಯಲ್ಲಿ ಚರ್ಚಿಸುವ ಅಗತ್ಯವೇ ಇಲ್ಲ ಎಂದು ತಿಳಿಸಿದರು.

# ಬಿರುಗಾಳಿ ಮಳೆಗೆ ನೆಲಕ್ಕೊರಗಿದ ಜೋಳದ ಬೆಳೆ



■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ಪಟ್ಟಣ ಸೇರಿದಂತೆ ಮುಳಸಾವಳಗಿ ಗ್ರಾಮದಲ್ಲಿ ಶುಕ್ರವಾರ ಬೀಸಿದ ಭಾರಿ ಬಿರುಗಾಳಿ ಹಾಗೂ ಮಳೆಗೆ ಬೆಳೆಗಳು ನೆಲಕ್ಕೊರಗಿ ರೈತರು ಹಾನಿಗೀಡಾಗಿದ್ದಾರೆ.

ಶುಕ್ರವಾರ ರಾತ್ರಿ ಆರಂಭಗೊಂಡ ಮಳೆ ಹಾಗೂ ಬಿರುಗಾಳಿಗೆ ಮುಳಸಾವಳಗಿ ಗ್ರಾಮದ ಶಿವಪುತ್ರ ಬಂದ್ರೋಡ ಎಂಬುವವರ 2 ಎಕರೆಯಲ್ಲಿನ ಜೋಳದ ಬೆಳೆ, ರಾಜಕುಮಾರ ಬಂದ್ರೋಡ ಎಂಬುವವರ ಎರಡು ಎಕರೆ ಮೆಕ್ಕೆಜೋಳ, ಸಾಹೇಬಗೌಡ ಹಿರ್ ಇವರ ಎರಡು ಎಕರೆ ಮೆಕ್ಕೆಜೋಳ ಮತ್ತು ಒಂದು ಎಕರೆ ಗೋಧಿ, ಲಗ್ಮವ್ವ ಬಂದ್ರೋಡ ಎಂಬುವವರ 1 ಎಕರೆ ಮೆಕ್ಕೆಜೋಳ ನೆಲಕ್ಕೆ ಬಿದ್ದು ಹಾಳಾಗಿದೆ. ಇನ್ನೂ ಪಟ್ಟಣದ ಇಂಡಿ ರಸ್ತೆಯಲ್ಲಿನ 1008 ಪಂಚಾಚಾರ್ಯ ಕಲ್ಯಾಣ ಮಂಟಪದ ಮುಂಭಾಗದ ಗ್ಲಾಸ್‌ಗಳು ಒಡೆದಿದ್ದು ಸಾಕಷ್ಟು ಹಾನಿ ಸಂಭವಿಸಿದೆ.

ರಾತ್ರಿ ಸುಮಾರು ಒಂದು ಗಂಟೆ ಕಾಲ ಸುರಿದ ಗುಡುಗು, ಮಿಂಚು ಸಹಿತ ಮಳೆಯಿಂದ ಯಾವುದೇ ಹೆಚ್ಚಿನ ಹಾನಿಯಾಗಿಲ್ಲವಾದರೂ, ರಭಸವಾಗಿ ಬೀಸಿದ ಗಾಳಿ ಮಾತ್ರ ರೈತ ಸಮುದಾಯಕ್ಕೆ ಸಾಕಷ್ಟು ಹಾನಿ ಮಾಡಿದೆ.

# ಗ್ರಾಮೀಣ ಮಟ್ಟದಲ್ಲಿ ಮಧ್ಯಸ್ಥಿಕೆ ಬಗ್ಗೆ ಹೆಚ್ಚು ಅರಿವು ಮೂಡಿಸಬೇಕು



■ ಉದಯರಶ್ಮಿ ದಿನಪತ್ರಿಕೆ

### ಪುನಶ್ಚೇತನ ತರಬೇತಿ ಕಾರ್ಯಕ್ರಮದಲ್ಲಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಹರೀಶ ಪ್ರಧಾನ ಸಲಹೆ

ವಿಜಯಪುರ: ವಿಜಯಪುರ ಮತ್ತು ಬಾಗಲಕೋಟೆ ಹಾಗೂ ಜಿಲ್ಲಾ ನ್ಯಾಯವಾದಿಗಳ ಸಂಘ ವಿಜಯಪುರ ಇವರ ಸಂಯುಕ್ತ ಆಶ್ರಯದಲ್ಲಿ ಮಧ್ಯಸ್ತಿಕೆದಾರರಿಗೆ ಎರಡು ದಿನಗಳ ಪುನಶ್ಚೇತನ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮ ಉದ್ಘಾಟಿಸಿದ ಹರೀಶ. ಎ. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಅಧ್ಯಕ್ಷರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವಿಜಯಪುರ ಇವರು, ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯ ಎಲ್ಲಾ ಮಧ್ಯಸ್ಥಿಕೆದಾರ-ರಿಗೆ ಕೌಟುಂಬಿಕ ನ್ಯಾಯಾಲಯದ ಪ್ರಕರಣಗಳಲ್ಲಿ ಮಧ್ಯಸ್ಥಿಕೆಗೆ ಬಂದ ಎಲ್ಲ ಪಕ್ಷಗಾರರಿಗೆ ಮಧ್ಯಸ್ಥಿಕೆಯ ಬಗ್ಗೆ ತಿಳುವಳಿಕೆ ಹೇಳಿ, ಮರಳಿ ಕೂಡಿಸಿ ಕಳಿಸುವ ಪ್ರಯತ್ನವನ್ನು ಮಧ್ಯಸ್ಥಿಕೆದಾರರು ಮಾಡಬೇಕು, ಮತ್ತು ಮಧ್ಯಸ್ಥಿಕೆಗೆ ಬಂದ ಬೇರೆ ಬೇರೆ ಸ್ವರೂಪದ ಕೇಸುಗಳಲ್ಲಿ ಸಹ ಕೇಸುಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ಮತ್ತು ವಾದಿ ಪ್ರತಿವಾದಿಯರ ಮನವೊಲಿಸುವಲ್ಲಿ ಹೆಚ್ಚು ಶ್ರಮವಹಿಸಬೇಕು ಮತ್ತು ಮಧ್ಯಸ್ಥಿಕೆಯ ತಿಳುವಳಿಕೆ ನೀಡಬೇಕು. ಗ್ರಾಮೀಣ ಮಟ್ಟದಲ್ಲಿ ಮತ್ತು ತಾಲೂಕು ಮಟ್ಟದಲ್ಲಿ ಮಧ್ಯಸ್ಥಿಕೆಯ ಬಗ್ಗೆ ಹೆಚ್ಚು ಅರಿವು ಮೂಡಿಸಬೇಕೆಂದು ಹೇಳಿದರು.

ಅಧ್ಯಕ್ಷರಾಗಿ ಅರವಿಂದ ಎಸ್ ಹಾಗರಗಿ, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವಿಜಯಪುರ ಮತ್ತು ಮುಖ್ಯ ಅತಿಥಿಗಳಾಗಿ ಡಿ ಜಿ ಬಿರಾದಾರ ಅಧ್ಯಕ್ಷರು ಜಿಲ್ಲಾ ನ್ಯಾಯಾಧೀಶ ಸಂಘ ವಿಜಯಪುರ, ಶಿವಾನಂದ ಮಲ್ಲನಗೌಡ ಪಾಟೀಲ್, ಅಧಿಕಾರೇತರ ಸದಸ್ಯರು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು, ಸಂಪನ್ಮೂಲ ವ್ಯಕ್ತಿಗಳಾಗಿ ಲಕ್ಷ್ಮೀಶ್ ರಾವ್ ಜಿ, ಹಿರಿಯ ತರಬೇತಿದಾರರು ಕರ್ನಾಟಕ ಮಧ್ಯಸ್ಥಿಕೆ, ಬೆಂಗಳೂರು ಮತ್ತು ಶ್ರೀಮತಿ ಅನಿತಾ ಆರ್ . ಮಧ್ಯಸ್ಥಿಕೆದಾರರು, ಕರ್ನಾಟಕ ಮಧ್ಯಸ್ಥಿಕೆ ಕೇಂದ್ರ ಬೆಂಗಳೂರು ಮತ್ತು ಶ್ರೀಮತಿ ಬಿವುಲಾಸಿಂಗ್, ಮಧ್ಯಸಿಕೆದಾರರು ಕರ್ನಾಟಕ ಮಧ್ಯಸ್ಥಿಕೆ ಕೇಂದ್ರ ಬೆಂಗಳೂರು, ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಪರೀಕ್ಷಾ ಪ್ರಕ್ರಿಯೆಯ ಪ್ರತಿ ಹಂತ ವೀಕ್ಷಿಸಿದ ಜಿ.ಪಂ. ಸಿಇಒ ರಿಷಿ ಆನಂದ

## ವಿಜಯಪುರದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಕೇಂದ್ರಗಳ ಪರಿಶೀಲಿಸಿದ ಜಿಪಂ ಸಿಇಒ । ಭದ್ರತಾ ವ್ಯವಸ್ಥೆಗಳ ಬಗ್ಗೆ ವಿಶೇಷ ಗಮನ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ರಾಜ್ಯಾದ್ಯಂತ ನಡೆಯುತ್ತಿರುವಎಸ್‌ಎಸ್‌ಎಲ್‌ಸಿಪರೀಕ್ಷೆ1ರ

ಹಿನ್ನೆಲೆಯಲ್ಲಿ ವಿಜಯಪುರ ಜಿಲ್ಲೆಯಲ್ಲಿ ಪರೀಕ್ಷೆಗಳು ಶಾಂತಿಯುತ ಹಾಗೂ ನಿಯಮಬದ್ಧವಾಗಿ ನಡೆಯುತ್ತಿರುವುದನ್ನು ಖಚಿತಪಡಿಸಿಕೊಳ್ಳಲು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಿಷಿ ಆನಂದ ರವರು ಶನಿವಾರ ನಗರದ ಪ್ರಮುಖ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಸವಿಸ್ತಾರವಾಗಿ ಪರಿಶೀಲನೆ ನಡೆಸಿದರು.

ಈ ವೇಳೆ ಅವರು ನಗರದ ಮರಾಠಿ ವಿದ್ಯಾಲಯ ಹಾಗೂ ಸರ್ಕಾರಿ ಬಾಲಕರ ಪ್ರೌಢಶಾಲೆ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ, ಪರೀಕ್ಷಾ ಪ್ರಕ್ರಿಯೆಯ ಪ್ರತಿಯೊಂದು ಹಂತವನ್ನು ನೇರವಾಗಿ ವೀಕ್ಷಿಸಿದರು. ವಿದ್ಯಾರ್ಥಿಗಳು ಸಮಯಕ್ಕೆ ಸರಿಯಾಗಿ ಹಾಜರಾಗಿರುವುದು, ಪ್ರವೇಶ ಪ್ರಕ್ರಿಯೆ ಸುಗಮವಾಗಿ ನಡೆಯುತ್ತಿರುವುದು ಮತ್ತು ಪರೀಕ್ಷಾ ಕೊಠಡಿಗಳಲ್ಲಿ ಶಿಸ್ತಿನ ವಾತಾವರಣ ಕಾಪಾಡಲಾಗಿರುವುದು ಗಮನಿಸಿದರು.

ಪರೀಕ್ಷಾ ಕೇಂದ್ರಗಳಲ್ಲಿ ಭದ್ರತಾ ವ್ಯವಸ್ಥೆಗಳ ಬಗ್ಗೆ ವಿಶೇಷ ಗಮನ ಹ-ರಿಸಿದ ಸಿಇಒ ರವರು, ಕೇಂದ್ರಗಳಲ್ಲಿ ಅಳವಡಿಸಲಾದ ಸಿಸಿಟಿವಿ ಕ್ಯಾಮರಾಗಳ ಕಾರ್ಯನಿರ್ವಹಣೆ, ನಿಗಾ ವಹಿಸುವ ಕ್ರಮಗಳು ಹಾಗೂ ನಿಯಂತ್ರಣ ವ್ಯವಸ್ಥೆಗಳ ಪರಿಣಾಮಕಾರಿತ್ವವನ್ನು ಪರಿಶೀಲಿಸಿದರು. ಯಾವುದೇ ಲೋಪಗಳಿಗೆ ಅವಕಾಶ ನೀಡದಂತೆ ಕಟ್ಟುನಿಟ್ಟಿನ ಮೇಲ್ವಿಚಾರಣೆ ಇರುವುದನ್ನು ಖಚಿತಪಡಿಸಿಕೊಂಡು, ಈ ವ್ಯವಸ್ಥೆಯನ್ನು ಇನ್ನಷ್ಟು ಬಲಪಡಿಸಲು ಸೂಚನೆ ನೀಡಿದರು.

ಇದಲ್ಲದೆ, ವಿದ್ಯಾರ್ಥಿಗಳ ಆರೋಗ್ಯ ಹಾಗೂ ಸುರಕ್ಷತೆಯ ದೃಷ್ಟಿಯಿಂದ ಕೇಂದ್ರಗಳಲ್ಲಿ ಲಭ್ಯವಿರುವ ಪ್ರಥಮ ಚಿಕಿತ್ಸೆ ಕಿಟ್‌ಗಳ ಸ್ಥಿತಿ, ತುರ್ತು ಪರಿಸ್ಥಿತಿಗಳಿಗೆ ಸಿದ್ಧತೆ, ಕುಡಿಯುವ ನೀರಿನ ಸಮರ್ಪಕ ವ್ಯವಸ್ಥೆ ಮತ್ತು ಇತರೆ ಮೂಲಭೂತ ಸೌಲಭ್ಯಗಳ ಲಭ್ಯತೆ ಕುರಿತು ಪರಿಶೀಲನೆ ನಡೆಸಿದರು. ವಿದ್ಯಾರ್ಥಿಗಳಿಗೆ ಯಾವುದೇ ರೀತಿಯ ಅಸೌಕರ್ಯ ಉಂಟಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಿತ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಪರೀಕ್ಷಾ ಕಾರ್ಯದಲ್ಲಿ ತೊಡಗಿರುವ ಮೇಲ್ವಿಚಾರಕರು, ಅಧೀಕ್ಷಕರು ಮತ್ತು ಸಿಬ್ಬಂದಿಯೊಂದಿಗೆ ಮಾತುಕತೆ ನಡೆಸಿದ ಸಿಇಒ ರವರು, ಪರೀಕ್ಷೆಯನ್ನು ಪಾರದರ್ಶಕವಾಗಿ ಮತ್ತು ನಿಯಮಾನುಸಾರವಾಗಿ ನಡೆಸುತ್ತಿರುವುದನ್ನು ಗಮನಿಸಿದರು.

ವಿದ್ಯಾರ್ಥಿಗಳಿಗೆ ಒತ್ತಡರಹಿತ ವಾತಾವರಣ ಒದಗಿಸುವುದು ಅತ್ಯಂತ ಮುಖ್ಯವಾಗಿದ್ದು, ಅದಕ್ಕಾಗಿ ಎಲ್ಲಾ ಸಿಬ್ಬಂದಿ ಸಹಕ-ರಿಸುತ್ತಿರುವುದು ಪ್ರಶಂಸನೀಯವೆಂದು ಹೇಳಿದರು.

ಅಲ್ಲದೆ, ಯಾವುದೇ ತುರ್ತು ಪರಿಸ್ಥಿತಿ ಎದುರಾದಲ್ಲಿ ತಕ್ಷಣ ಸ್ಪಂದಿಸಲು ಆರೋಗ್ಯ ಹಾಗೂ ಪೊಲೀಸ್ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸುವಂತೆ ಸೂಚನೆ ನೀಡಿ, ಪರೀಕ್ಷೆಗಳ ನಿರ್ವಿಘ್ನ ನಿರ್ವಹಣೆಗೆ ಅಗತ್ಯವಿರುವ ಎಲ್ಲಾ ಕ್ರಮಗಳನ್ನು ಕೈಗೊಳ್ಳುವಂತೆ ತಿಳಿಸಿದರು.

ಒಟ್ಟಿನಲ್ಲಿ, ವಿಜಯಪುರ ಜಿಲ್ಲೆಯ ಪರೀಕ್ಷಾ ಕೇಂದ್ರಗಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ1 ಶಾಂತಿಯುತ, ಪಾರದರ್ಶಕ ಮತ್ತು ಯಶಸ್ವಿಯಾಗಿ ನಡೆಯುತ್ತಿರುವುದನ್ನು ಈ ಪರಿಶೀಲನೆ ವೇಳೆ ಸಿಇಒ ಅವರು ದೃಢಪಡಿಸಿದರು.

ಈ ಸಂದರ್ಭದಲ್ಲಿ ಶಿಕ್ಷಣ ಇಲಾಖೆಯ ಅಧಿಕಾರಿಗಳು, ಶಾಲೆಗಳ ಮುಖ್ಯೋಪಾಧ್ಯಾಯರು, ಪರೀಕ್ಷಾ ಕೇಂದ್ರಗಳ ಅಧೀಕ್ಷಕರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ನ್ಯಾಯ ವ್ಯವಸ್ಥೆಯಲ್ಲಿ ಮಹತ್ವದ ಪಾತ್ರ ವಹಿಸುವ ನಿಖರ ತನಿಖೆ & ದೃಢ ಸಾಕ್ಷಿ

■ ಉದಯರಶ್ಮಿ ದಿನಪತ್ರಿಕೆ



### ವಿಜಯಪುರದಲ್ಲಿ ಕಾರ್ಯಾಗಾರ ಉದ್ಘಾಟಿಸಿದ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಹರೀಶ ಎ. ಅಭಿಮತ

ವಿಜಯಪುರ: ನ್ಯಾಯ ವ್ಯವಸ್ಥೆಯಲ್ಲಿ ನಿಖರವಾದ ತನಿಖೆ ಮತ್ತು ದೃಢವಾದ ಸಾಕ್ಷ್ಯಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದು ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಹ-ರೀಶ ಎ. ಹೇಳಿದ್ದಾರೆ.

ಶನಿವಾರ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯ ಕಾನೂನು ಶಾಲೆ ಮತ್ತು ಅಲೈಡ್ ಹೆಲ್ತ್ ಸೈನ್ಸಸ್ ವಿಭಾಗ, ಜಿಲ್ಲಾ ಪೊಲೀಸ್ ಇಲಾಖೆಯ ಸಹಯೋಗದಲ್ಲಿ ಆಯೋಜಿಸಿದ್ದ ಅಪರಾಧ ಕಾನೂನುಗಳು, ವಿಶೇಷ ಕಾಯಿದೆಗಳು ಮತ್ತು ಫರೆನ್ಸಿಕ್ ವಿಜ್ಞಾನ ಕುರಿತ ಎರಡು ದಿನಗಳ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಫೋರೆನ್ಸಿಕ್ ವಿಜ್ಞಾನವು ನ್ಯಾಯ ನಿರ್ಣಯದಲ್ಲಿ ಪ್ರಮುಖ ಪಾತ್ರವಹಿಸುತ್ತಿದ್ದು, ತಂತ್ರಜ್ಞಾನ ಮತ್ತು ಕಾನೂನುಗಳ ಸಮನ್ವಯ ಅಗತ್ಯವಾಗಿದೆ ಎಂದು ಅವರು ಹೇಳಿದರು.

ವಿಜಯಪುರ ಎಸ್ಪಿ ಲಕ್ಷ್ಮಣ ಬಿ. ನಿಂಬರಗಿ ಮಾತನಾಡಿ, ಇಂದಿನ ಕಾಲಘಟ್ಟದಲ್ಲಿ ಸೈಬರ್ ಅಪರಾಧಗಳು ಮತ್ತು ಸಂಘಟಿತ ಅಪರಾಧಗಳು ಹೆಚ್ಚುತ್ತಿದ್ದು, ತನಿಖೆ ಪ್ರಕ್ರಿಯೆಯಲ್ಲಿ ವಿಜ್ಞಾನಾಧಾರಿತ ವಿಧಾನಗಳನ್ನು ಅಳವಡಿಸಿಕೊಳ್ಳುವುದು ಅಗತ್ಯವಿದೆ. ವಿದ್ಯಾರ್ಥಿಗಳು ತಮ್ಮ ಕಾನೂನು ಜ್ಞಾನವನ್ನು ಪ್ರಾಯೋಗಿಕವಾಗಿ ಬಳಸಬೇಕು ಎಂದು ಕರೆ ನೀಡಿದರು.

ಬಿ.ಎಲ್.ಡಿ.ಇ ಡೀಮ್ಡ್ ವಿವಿ ಸಮಕುಲಾಧಿಪತಿ ಡಾ. ವೈ. ಎಂ. ಜಯರಾಜ ಮಾತನಾಡಿ,, ಕಾನೂನು ಮತ್ತು ವೈದ್ಯಕೀಯ ಕ್ಷೇತ್ರಗಳ ನಡುವೆ ಸಮನ್ವಯವು ಉತ್ತಮ ನ್ಯಾಯ ವ್ಯವಸ್ಥೆ ರೂಪಿಸಲು ಸಹಾಯಕವಾಗುತ್ತದೆ. ಇಂದಿನ ಸಮಾಜದಲ್ಲಿ ಸಾಮಾಜಿಕ ಜಾಲತಾಣಗಳನ್ನು ಯುವಕರು ಜವಾಬ್ದಾರಿಯುತವಾಗಿ ಬಳಸಬೇಕು. ಇಂಥ ಕಾರ್ಯಾಗಾರಗಳು ವಿದ್ಯಾರ್ಥಿಗಳಲ್ಲಿ ಸಂಶೋಧನೆ ಮನೋಭಾವನೆ ಮತ್ತು ವೃತ್ತಿಪರ ಕೌಶಲ್ಯಗಳನ್ನು ಬೆಳೆಸುತ್ತವೆ ಎಂದು ಹೇಳಿದರು.

ಹೆಚ್ಚುವರಿ ಎಸ್ಪಿ ರಾಮನಗೌಡ ಹಟ್ಟಿ, ಕಾನೂನು ಶಾಲೆಯ ಡೀನ್ ಮತ್ತು ಪ್ರಾಚಾರ್ಯ ಡಾ. ರಘುವೀರ ಕುಲಕರ್ಣಿ, ವೈದ್ಯಕೀಯ ಮಹಾವಿದ್ಯಾಲಯದ ಡೀನ್ ಡಾ. ತೇಜಸ್ವಿನಿ ವಲ್ಲಭ, ಸಂಪನ್ಮೂಲ ವ್ಯಕ್ತಿಗಳಾದ, ಡಿ.ಎಸ್.ಪಿ (ಸಿಐಡಿ) ಘಟಕದ ಯಶವಂತ, ಎಫ್.ಎಸ್.ಎಲ್ ವಿಭಾಗದ ನಿವೃತ್ತ ಉಪನಿರ್ದೇಶಕ ವಿ. ಜಿ. ನಾಯಕ, ನಿವೃತ್ತ ಸಹಾಯಕ ನಿರ್ದೇಶಕ ಬಿ. ಸಿ. ರವೀಂದ್ರ, ಸಿಐಡಿ ಘಟಕದ ಕಾನೂನು ಹಿರಿಯ ಸಲಹೆಗಾರ ಮಹೇಶ್ ವೈದ್ಯ, ಮುಂತಾದವರು ಉಪಸ್ಥಿತರಿದ್ದರು.

ಈ ಕಾರ್ಯಾಗಾರದಲ್ಲಿ ಜಿಲ್ಲಾ ಪೊಲೀಸ್ ಇಲಾಖೆಯ ಸಿಬ್ಬಂದಿ, ಜಿಲ್ಲಾ ಅಭಿಯೋಜಕರು, ಕಾನೂನು ಶಾಲೆಯ ವಿದ್ಯಾರ್ಥಿಗಳು, ಹಾಗೂ ಫೋರೆನ್ಸಿಕ್ ಸೈನ್ಸ್ ವಿಭಾಗದ ವಿದ್ಯಾರ್ಥಿಗಳು ಪಾಲ್ಗೊಂಡರು.

ಕಾನೂನು ಶಾಲೆಯ ಸಹಾಯಕ ಪ್ರಾಧ್ಯಾಪಕಿ ಲಾವಣ್ಯ ಕುಲಕರ್ಣಿ ಸ್ವಾಗತಿಸಿದರು. ಫೋರೆನ್ಸಿಕ್ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಈಶ್ವರ ನವಲಗುಂದ ವಂದಿಸಿದರು.

# ಮುಖ್ಯಮಂತ್ರಿಗಳ ಚಿನ್ನದ ಪದಕಕ್ಕೆ ಭಾಜನರಾದ ಪೊಲೀಸ್ ಅಧಿಕಾರಿಗಳು



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ತಮ್ಮ ದಕ್ಷ ಸೇವೆಯಿಂದಾಗಿ 2025 ನೇ ಸಾಲಿನ ಮುಖ್ಯಮಂತ್ರಿಗಳ ಚಿನ್ನದ ಪದಕಕ್ಕೆ ಜಿಲ್ಲೆಯ ಐವರು ಪೊಲೀಸ್ ಅಧಿಕಾರಿಗಳು ಭಾಜನರಾಗಿದ್ದಾರೆ.

ಮುಖ್ಯಮಂತ್ರಿಗಳ ಚಿನ್ನದ ಪದಕದ ಗೌರವಕ್ಕೆ ಪಾತ್ರರಾದ 1. ತುಳಜಪ್ಪ. ಸುಲ್ಪಿ ಡಿ. ಎಸ್. ಪಿ ವಿಜಯಪುರ ಗ್ರಾಮೀಣ ಉಪ ವಿಭಾಗ, 2. ಬಾಳಪ್ಪ. ನಂದಗಾವಿ ಡಿ. ಎಸ್. ಪಿ ಬಸವನ ಬಾಗೇವಾಡಿ ಉಪ ವಿಭಾಗ, 3. ಶ್ರೀಕಾಂತ್ ಕಾಂಬಳೆ ಪೊಲೀಸ್ ಸಬ್ ಇನ್ಸ್ಪೆಕ್ಟರ್ ಸಿಂದಗಿ ಪೊಲೀಸ್ ಠಾಣೆ, 4. ರಾಮನಗೌಡ ಬಿರಾದಾರ ಸಿಪಿಸಿ 1708 ಮನಗೂಳಿ ಪೊಲೀಸ್ ಠಾಣೆ, 5. ಚಿದಾನಂದ ಗಿಡಗಂಚಿ ಸಿಪಿಸಿ 1823 ಗಾಂಧಿಚೌಕ ಪೊಲೀಸ್ ಠಾಣೆ ಅವರನ್ನು ವಿಜಯಪುರ ಜಿಲ್ಲೆ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಅವರು ಅಭಿನಂದಿಸಿದ್ದಾರೆ..

# ಒಲವಿನ ಪೂಜೆಯಲಿ ಒಂದಾಗೋಣ

■ ಉದಯರಶ್ಮಿ ದಿನಪತ್ರಿಕೆ




ಗೆಳತಿನಿನ್ನಹೆಸರುಕೇಳಿದರೆಸಾಕುಮೈಯಲ್ಲಿರುವ ನರನಾಡಿಗಳೆಲ್ಲ ಮಿಡಿಯುವ ವೀಣೆಯಾಗುತ್ತವೆ. ಮನಸ್ಸು ಬಾನಾಡಿಯಾಗಿ ಬಾನೆತ್ತರಕ್ಕೆ ಚಿಮ್ಮುತ್ತವೆ. ವರ್ಷದ ನಂತರ ನಿನ್ನ ಭೇಟಿಯಾಗುವ ಕ್ಷಣ ಸನಿಹ ಬಂದಂತೆ ಮನದಲ್ಲೇನೋ ಹೇಳಲಾಗದ ಭಾವ ಇದುವರೆಗೂ ಕಾಣದ ಕಂಪನ. ಅಂದ ಚೆಂದದ ಮೈ ಮಾಟಕ್ಕೆ ಕಿರೀಟವಿಟ್ಟಂತೆ ನಿನ್ನ ನಡತೆ. ನಿನಗೆ ಸೋಲದ ಗಂಡು ಇನ್ನೂ ಹುಟ್ಟಿಯೇ ಇಲ್ಲ ಅನಿಸುತ್ತದೆ. ಎಂಥ ಗಂಡೆದೆಯಿರುವವನೂ ನಿನ್ನ ಮುಂದೆ ಮಂಡೆಯೂರಿ ನಿನ್ನ ಪ್ರೀತಿಗಾಗಿ ಅರ್ಜಿ



ಗುಜರಾಯಿಸುವನು.ನಿನ್ನ ಮೃದು ಹೃದಯ ತನ್ನದಾಗಿಸಿಕೊಳ್ಳಲು ಹಂಬಲಿಸದೇ ಇರನು. ಪರಿ ಪರಿಯಾಗಿ ಬೇಡಿಕೊಳ್ಳದೇ ಇರನು. ಕವಿಯ ಕಲ್ಪನೆಗೆ ರೂಪ ಕೊಟ್ಟಂತಿರುವ ಅಪರೂಪದ ರೂಪ ನಿನ್ನದು. ಪ್ರಥಮ ನೋಟದಲ್ಲೇ ಯಾರೂ ಕಾಲಿಡದ ನನ್ನ ಹೃದಯದ ಅರಮನೆಯ ಕೀಲಿ ತೆರೆದು ನಿನಗೆ ಪ್ರವೇಶ ನೀಡಿಯಾಗಿದೆ. ಹೊರ ಹೋಗದಂತೆ ಹೃದಯಕ್ಕೆ ದೊಡ್ಡ ಬೀಗವನ್ನೂ ಅಂದೇ ಜಡಿದಾಗಿದೆ. ಹಾಗಿದ್ದ ಮೇಲೆ ನೀನು ಹೊರ ನಡೆಯುವ ಮಾತೇ ಇಲ್ಲ.

ಮುನಿಸು ಜಗಳಗಳಲ್ಲೂ ಪ್ರೀತಿಯನ್ನೇ ತುಂಬುವ ನಿನ್ನ ಗುಣ ಅಪ್ಯಾಯಮಾನ. ನೋವುಗಳನ್ನು ನಲಿವಾಗಿ ರೂಪಾಂತರಿಸುವ ಕಲೆ ನಿನಗೆ ಅದಾವ ಕಲೆಗಾರ ಕಲಿಸಿದನೋ ನಾ ಕಾಣೆ. ನನ್ನ ಸಂಕಷ್ಟಗಳಿಗೆಲ್ಲ ಮುದ್ದಿನ ಮದ್ದು ಸವರಿ ಜೀವನವೇ ಬೇಡ ಎದ್ದು ಹೊರಟ ನನ್ನಲ್ಲಿ ಜೀವನೋತ್ಸಾಹ ತುಂಬಿದ ಶಕ್ತಿ ದೇವತೆ ನೀನು. ಬಾಳಿನ ಸುಂದರ ಅರಮನೆ ಕಟ್ಟಲು ಒಲವೇ ಆಧಾರ. ಅರಿವೇ ಸುಂದರ ಬದುಕಿನ ಮೂಲ. ಎಂದು ನುಡಿಯದೇ ನಡೆದು ತೋರುತ್ತಿದ್ದ ನಿನ್ನ ಮೇಲೆ ಅದಾವ ತತ್ವಜ್ಞಾನಿಯ ನೆರಳು ಬಿದ್ದಿತ್ತೋ ಗೊತ್ತಿಲ್ಲ. ನನ್ನನ್ನೂ ಅದೇ ದಾ- ರಿಯಲ್ಲಿ ನಡೆಯುವಂತೆ ಎಳೆದು ತಂದು ನಿಲ್ಲಿಸಿದ ಮಾಯಾದೇವತೆ ನೀನು. ನನ್ನ ಕಣ್ಣಿನ ರೆಪ್ಪೆ ಅಂಟಿಕೊಳ್ಳದಿರುವಾಗಲೂ ಅಂಟಿಕೊಂಡಾಗಲೂ





ನೋಡಲು ಹಂಬಲಿಸುವ ಪುತ್ಥಳಿ ಬೊಂಬೆಯೊಂದೇ ಅದೇ ನೀನು ಎಂದು ಬೇರೆ ಹೇಳಬೇಕಿಲ್ಲ.

ನಿನ್ನದೇ ನೆನಪಿನ ಗುಂಗಲ್ಲಿ ಹಗಲು ಇರಳು ತಿಳಿಯದಾಗಿದೆ. ಎಲ್ಲ ಹುಡುಗಿಯರಲ್ಲೂ ನೀನೇ ಕಾಣುತ್ತಿರುವೆ. ಉಳಿದ ಹುಡುಗಿಯರಂತೆ ನಿನ್ನಲ್ಲಿ ಹಟಮಾರಿತನ ಸಿಡಿಮಿಡಿ ಗುಣ ಕಾಣಲೇ ಇಲ್ಲ ಜೊತೆಗಿದ್ದ ದಿನಗಳಲ್ಲೆಲ್ಲ ಕೂಡಿ ಇರುವ ಪಾಠವೊಂದನ್ನೇ ಕಲಿಸಿ ಕೊಟ್ಟಾಕೆ ನೀನು. ರೂಪ ರಾಶಿಯಂದಿಗೆ ಆ ದೇವ ನಿನಗೆ ಸದ್ಗುಣಗಳನ್ನು ಧಾರೆಯೆರೆಯುವುದನ್ನು ಮರೆತಿಲ್ಲ. ಮಾತಿಗಿಂತ ಮೌನದಲ್ಲೇ ಪ್ರೀತಿ ಅಭಿವ್ಯಕ್ತಿಸುವ ಪರಿ ಮೆಚ್ಚಲೇಬೇಕಾದುದು. ನಸುನಗುತ್ತ ಲೇ ಜೀವನದ ಅಡೆತಡೆಗಳಿಗೆ ಪರಿಹಾರ ಸೂಚಿಸುವುದನು ಕಂಡು ನಿಬ್ಬೆರಗಾಗಿದ್ದೇನೆ. ಪ್ರೀತಿಯ ಔಷಧಿಗೆ ಮನಸ್ಸಿಗಾದ ಎಂಥ ಹಳೆಯ ಗಾಯವನ್ನೂ ಮಾಯುವಾಗಿಸುವ ಶಕ್ತಿಯಿದೆ ಎಂಬುದನ್ನು ಸಾಧಿಸಿ ತೋರಿಸಿದಾಕೆ ನೀನು. ಗೆಳತಿ ಹೇಳು ಇಷ್ಟೆಲ್ಲ ನನ್ನ ಜೀವನದಲ್ಲಿ ಆವರಿಸಿಕೊಂಡ ನಿನ್ನನ್ನು ಮರೆಯುವದಾದರೂ ಹೇಗೆ ಮರೆಯಲು ಮನಸ್ಸು ಮಾಡಿದಷ್ಟು ಮತ್ತೆ ಮತ್ತೆ ನೆನಪಿಗೆ ಬರುವಂಥವಳು ನೀನು. ನನ್ನ ಹೃದಯವನ್ನು ಮುಟ್ಟುಗೋಲು ಹಾಕಿಕೊಂಡು ಅಷ್ಟು ದೂರ ನೀನಿದ್ದರೂ ನಾನು ನಿನ್ನ ಸವಿನೆನಪುಗಳಿಂದ ಮುಕ್ತಿ ಹೊಂದಲು ಸಾಧ್ಯವೇ ಇಲ್ಲ. ಹೃದಯದ ಬ್ಯಾಂಕಿನಲ್ಲಿ ನಿನ್ನದೊಂದೇ ಖಾತೆ ಅದು ಒಲುಮೆಯ ಉಳಿತಾಯದ ಖಾತೆ ಬಳಿಸಿದಷ್ಟು ಬೆಳೆಯುವಂಥದು. ಪ್ರತಿಕೂಲ ಪರಿಸ್ಥಿತಿಯಲ್ಲಿ ಅನುಕೂಲವಾಗಿರುವುದು ಹೇಗೆ ಎಂದು ಹೇಳಿಕೊಟ್ಟದ್ದಿಯಾ ಆದರೂ ಮನಸ್ಸೇಕೋ ನಿನ್ನ ಯೋಚನೆಗಳಲ್ಲಿಯೇ ಬಿಟ್ಟೂ ಬಿಡದೇ ಸುಳಿಯುತ್ತಿದೆ.

ಸಾಗರದ ಅಲೆಗಳು ಅಪ್ಪಳಿಸುವಂತೆ ನಿನ್ನ ನೆನಪುಗಳು ಮನದ ದಡದಲ್ಲಿ ಅಪ್ಪಳಿಸುತ್ತಿವೆ. ಏರಿಳಿತದೊಂದಿಗೆ ಸದ್ದು ಹೆಚ್ಚಿಸುತ್ತಲೇ ಇವೆ. ಏಕಾಂತದಲ್ಲಂತೂ ನಿನ್ನಸವಿನೆನಪಿನ ಗಾನ ಸುಧೆ ತೇಲಿ ಬಂದು ಹೃದಯದ ಬಡಿತ ತಾಳಕ್ಕೆ ಸಿಗದೇ ಹೋಗುತ್ತದೆ. ಅದೇನು ಮೋಡಿಯೋ ನಾ ಕಾಣೆ? ಪ್ರೀತಿಯ ಹೆಸರಲ್ಲಿ ಈಗಾಗಲೇ ಅರ್ಧ ಸುಟ್ಟುಕೊಂಡ ಹೃದಯ ಹೊತ್ತು,ಪ್ರೀತಿಯ ಶಬ್ದಕ್ಕೆ ಬೆನ್ನು ತೋರಿ ನಡೆದವನಿಗೆ ಮತ್ತೆ ಹೃದಯ ಒಲವ ಪಲ್ಲವಿ ಹಾಡುವ ಹಾಗೆ ಮಾಡಿದ ಮಾಟಗಾತಿ ನೀನು. ಮರಭೂಮಿಯಂತಾದ ಎದೆಯಲ್ಲಿ ಅನುರಾಗದ ಗುಲಾಬಿ ಅರಳಿಸಿದ ಸೊಗಸುಗಾತಿ ನೀನು.

ರಾತ್ರಿಯೆಲ್ಲ ನಿನ್ನ ಚಿತ್ರವೇ ಕಣ್ಮುಂದೆ ಬಂದು ನಿಂತು ನಿದ್ದೆ ಮಾಡಲು ಬಿಡುತ್ತಿಲ್ಲ. ಹಗಲು ಹೋದಲೆಲ್ಲ



ನಿನ್ನದೇ ಘಮಲು. ರಾತ್ರಿಯೂ ನಿನ್ನದೇ ಅಮಲು. ಬಿಡದಂತೆ ಕಾಡುವ ನಿನ್ನ ನೆನಪುಗಳಿಗೆ ಇತಿಶ್ರೀ ಹಾಕಲು ಮನಸ್ಸೇ ಬರುತ್ತಿಲ್ಲ. ನಾನು ನೀನು ಒಂದಾಗಿ ಬಾಳುವ ಮಧುರ ಗಳಿಗೆಗೆ ಕ್ಷಣ ಗಣನೆ ಶುರುವಾಗಿದೆ. ಅರಿಷಿಣದ ಕೊಂಬು ಕಟ್ಟಿದ ದಾರ ಹಿಡಿದು ನಿನ್ನ ಇಷ್ಟ ದೈವ ಗಣಪತಿ ಗುಡಿಯಲ್ಲಿ ಕಾಯುತಿರುವೆ. ಹೆದರದಿರು ನನ್ನ ನಿನ್ನ ಭಾವಿ ಅತ್ತೆ ಮಾವಂದರೂ ನಮ್ಮ ಶುಭ ವಿವಾಹಕೆ ಹಸಿರು ನಿಶಾನೆ ತೋರಿಸಿಹರು ಯಾವ ತಡೆಗೋಡೆಗಳು ನಮ್ಮನ್ನು ತಡೆಯಲಾರವು. ಬೇಗ ಬಂದು ಬಿಡು ಒಲವಿನ ಪೂಜೆಯಲಿ ಒಂದಾಗೋಣ.

ಲೇಖನ
– ಜಯಶ್ರೀ.ಜೆ. ಅಬ್ಬಿಗೇರಿ
ಇಂಗ್ಲೀಷ್
ಉಪನ್ಯಾಸಕರು
ಬೆಳಗಾವಿ
ಮೊ: 9449234142



# ಇನರ್ ವೀಲ್ ಕ್ಲಬ್ ಆಫ್ ಗುಲಬರ್ಗಾ ನಾರ್ಥ್ ವತಿಯಿಂದ ಮಹಿಳಾ ದಿನಾಚರಣೆ



■ ಉದಯರಶ್ಮಿ ದಿನಪತ್ರಿಕೆ

ಕಲಬುರಗಿ::ನಗರದ ರೋಟರಿ ಕ್ಲಬ್‌ನಲ್ಲಿ ಇನರ್ ವೀಲ್ ಕ್ಲಬ್ ಆಫ್ ಗುಲಬರ್ಗಾ ನಾರ್ಥ್ ವತಿಯಿಂದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ 'ಐಡಬ್ಲ್ಯುಸಿ ಆರೋಹಿಣಿ ಅವಾರ್ಡ್ಸ್ 2026' ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಡಾ. ಲಕ್ಷ್ಮೀ ಪಾಟೀಲ್ ಮಾಕಾ ಹಾಗೂ ಡಾ. ಜ್ಯೋತಿ ರವೀಂದ್ರ ತೆಗನೂರ ಅವರು ಭಾಗವಹಿಸಿ ಕಾರ್ಯಕ್ರಮಕ್ಕೆ ಮೆರುಗು ತಂದರು.

ಈ ಸಂದರ್ಭದಲ್ಲಿ ಡಾ. ಮಹಾನಂದ ಮೆಳಕುಂಡಿ, ಡಾ. ಸಂಧ್ಯಾ ಎಸ್. ಕಾಣೇಕರ್, ಡಾ. ಶಿಲ್ಪಾ ಮಂಗಶೆಟ್ಟಿ, ಡಾ. ಅರ್ಚನಾ ಎಂ. ಕಿನಗಿ ಹಾಗೂ ಮಧು ಬಸುದೆ ಅವರಿಗೆ 'ಆರೋಹಿಣಿ ಅವಾರ್ಡ್ಸ್' ಪ್ರದಾನ ಮಾಡಲಾಯಿತು.

ಕಾರ್ಯಕ್ರಮವನ್ನು ಅಧ್ಯಕ್ಷೆ ನಮ್ರತಾ ಘಟಾಟೆ ಮತ್ತು ಕಾರ್ಯದರ್ಶಿ ಸವಿತಾ ಹಳಹಳ್ಳಿ ಅವರ ನೇತೃತ್ವದಲ್ಲಿ ಯಶಸ್ವಿಯಾಗಿ ನಡೆಸಲಾಯಿತು. ಫ್ಯಾನ್ಸಿ ಡ್ರೆಸ್ ಸ್ಪರ್ಧೆಯಲ್ಲಿ ಡಾ. ಸಿದ್ದಗಂಗಾ ಮಂಗಶೆಟ್ಟಿ ಪ್ರಥಮ ಸ್ಥಾನ ಪಡೆದುಕೊಂಡರು. 5 ಕ್ಲಬ್ನ ಸದಸ್ಯರು ಹಾಜರಿದ್ದರು.



**ಕಲಬುರಗಿ: ನಗರದ ತಾಜ್ ಸುಲ್ತಾನಪುರ ರಸ್ತೆಯ ಫಿಲ್ಟರ್‌ಬೆಡ್ ಏರಿಯಾದ ಸೇವಾಲಾಲ್ ವೃತ್ತದ ಬಳಿ ಗೃಹ ಬಳಕೆಯ ಗ್ಯಾಸ್ ಸಿಲಿಂಡರ್‌ಗಾಗಿ ಗ್ರಾಹಕರು ಸರತಿ ಸಾಲಿನಲ್ಲಿ ಕಾಯುತ್ತ ನಿಂತಿರುವುದು.**

# ಬೆಂಗಳೂರಲ್ಲಿ ಕಲಾವಿದ ಆಯಾಜುದ್ದೀನ್ ಪಟೇಲ್ ಅವರಿಗೆ ರೋಷಿನಿ ಪ್ರಶಸ್ತಿ ಪ್ರದಾನ

■ ಉದಯರಶ್ಮಿ ದಿನಪತ್ರಿಕೆ

ಕಲಬುರಗಿ: ಖ್ಯಾತ ಕಲಾವಿದ ಮತ್ತು ಇತಿಹಾಸಕಾರ ಮೊಹಮ್ಮದ್ ಆಯಾಜುದ್ದೀನ್ ಪಟೇಲ್ ಅವರಿಗೆ ಬೆಂಗಳೂರಿನ ವೈಟ್ ಪೆಟಲಸ್‌ನಲ್ಲಿ ಗುರುವಾರ ನಡೆದ ಸಮಾರಂಭದಲ್ಲಿ ಪ್ರತಿಷ್ಠಿತ ರೋಷಿನಿ ಪ್ರಶಸ್ತಿ 2026 ನೀಡಿ ಗೌರವಿಸಲಾಯಿತು.

ಕಳೆದ ಮೂರು ದಶಕಗಳಿಂದ ಕಲೆ, ಸಂಸ್ಕೃತಿ ಮತ್ತು ಪರಂಪರೆಯ ಕ್ಷೇತ್ರಗಳಲ್ಲಿ ಅವರು ನೀಡಿರುವ ಮಹತ್ವದ ಕೊಡುಗೆಗಳನ್ನು ಗುರುತಿಸಿ ಈ ಪ್ರಶಸ್ತಿಯನ್ನು ಪ್ರದಾನಿಸಲಾಯಿತು. ಈ ಗೌರವವನ್ನು ಈದ್ ಮಿಲನ್ ಕಾರ್ಯಕ್ರಮದ ಅಂಗವಾಗಿ ನೀಡಲಾಯಿತು.

ಕರ್ನಾಟಕ ವಿಧಾನಸಭೆಯ ಸ್ಪೀಕರ್ ಯು.ಟಿ. ಖಾದರ್, ಬುಕ್ಕರ್ ಪ್ರಶಸ್ತಿ ಪುರಸ್ಕೃತ ಬಾನು ಮುಷ್ತಾಕ್ ಹಾಗೂ ಕಾರ್ಯಕ್ರಮದ ಆಯೋಜಕ ಮತ್ತು ಕರ್ನಾಟಕದ ಐದು ಗ್ಯಾರಂಟಿಗಳ ರಾಜ್ಯ ಮಟ್ಟದ ಸಚಿವ ಮೆಹ್ರೋಜ್ ಖಾನ್ ಅವರು ಪ್ರಶಸ್ತಿಯನ್ನು ಪ್ರದಾನ ಮಾಡಿದರು.

ಈ ಸಂದರ್ಭದಲ್ಲಿ ಗುಲ್ಬರ್ಗಾ ಉತ್ತರ ಕ್ಷೇತ್ರದ ಶಾಸಕಿ ಕಾನೀಜ್ ಫಾತಿಮಾ, ಕಾಂಗ್ರೆಸ್ ಯುವ ನಾಯಕ ಫರಾಝ್ ಉಲ್ ಇಸ್ಲಾಂ, ಕಲಬುರಗಿ ತಾಲ್ಲೂಕಿನ ಕರ್ನಾಟಕ ಐದು ಗ್ಯಾರಂಟಿಗಳ ಅಧ್ಯಕ್ಷ ಅಹ್ಮರ್ ಇಸ್ಲಾಂ, ಶಾಸಕ ರಹೀಮ್ ಖಾನ್, ಸಚಿವ ಎಚ್.ಕೆ. ಪಾಟೀಲ್, ಸತೀಶ್ ಜಾರಕಿಹೊಳಿ, ಸಿ.ಎಂ. ಇಬ್ರಾಹಿಂ, ರೋಷನ್ ಬೈಗ್ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

# ಕಾರಾಗೃಹದ ಬಂದಿಗಳಿಗೆ ಸಾಕ್ಷರತಾ ಜಾಗೃತಿ ಕಾರ್ಯಾಗಾರ

■ ಉದಯರಶ್ಮಿ ದಿನಪತ್ರಿಕೆ



ಕಲಬುರಗಿ: ಇಲ್ಲಿನ ಕೇಂದ್ರ ಕಾರಾಗೃಹದಲ್ಲಿ ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಡಯಟ್ ಹಾಗೂ ಜಿಲ್ಲಾ ವಯಸ್ಕರ ಶಿಕ್ಷಣ ಇಲಾಖೆ ಹಾಗೂ ಕೇಂದ್ರ ಕಾರಾಗೃಹ ಸಹಯೋಗದೊಂದಿಗೆ ಬಂದಿಗಳಿಗೆ ಸಾಕ್ಷರತಾ ಜಾಗೃತಿ ಅರಿವಿನ ಕಾರ್ಯಗಾರ ಹಮ್ಮಿಕೊಳ್ಳಲಾಯಿತು.

ಈ ಕಾರ್ಯಕ್ರಮಕ್ಕೆ ಉದ್ಘಾಟಕರಾಗಿ ಆಗಮಿಸಿದ ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ ಹನುಮಂತರಾಯ ಹರನಾಳ ಮಾತನಾಡುತ್ತಾ ಕಾರಾಗೃಹದಲ್ಲಿ ಅನಕ್ಷರಸ್ಥರು ಓದಿನ ಕಡೆಗೆ ಹೆಚ್ಚಿನ ಗಮನವನ್ನು ಕೇಂದ್ರೀಕರಿಸಿ ಸರಿ ತಪ್ಪುಗಳ ಪರಿಕಲ್ಪನೆಗಳನ್ನು ಸಾಕ್ಷರತೆಯ ಮೂಲಕ ಕಂಡುಕೊಂಡು ಉತ್ತಮ ಬದುಕಿಗೆ ಅಣಿಯಾಗಿ ಬೇರೊಬ್ಬರಿಗೆ ದಾ- ರಿದೀಪವಾಗುವ ನಿಟ್ಟಿನಲ್ಲಿ ತಾವುಗಳು ಬಾಳ ಬೇಕೆಂದು ಹೇಳಿದರು ಈ ಕಾರ್ಯಕ್ರಮದಲ್ಲಿ 20 ಕಲಿಕಾರ್ಥಿಗಳಿಗೆ ಒಬ್ಬ ಬೋಧಕರನ್ನು ನೇಮಕ ಮಾಡಿ ಅವರಿಗೆ ಅಗತ್ಯ ಕಲಿಕಾ ಪರಿಕರಗಳನ್ನು ಮತ್ತು ಬೋಧಕರಿಗೆ ತರಬೇತಿಗಳು ನೀಡಲಾಗುವುದೆಂದು ಹೇಳಿದರು.

ಅತಿಥಿಗಳಾಗಿ ಆಗಮಿಸಿದ ಕಾರ್ಯಕ್ರಮ ಪ್ರಾಯೋಜಕ ಗಿರೀಶ್ ಜಕಾಪೂರ ಮಾತನಾಡುತ್ತಾ ಅಕ್ಷರವನ್ನು ಕಲಿತು ಸುಂದರ ಬದುಕನ ಕಟ್ಟಿಕೊಳ್ಳಬೇಕು ಈ ಕಾರ್ಯಕ್ರಮ ಅನುಷ್ಠಾನದಲ್ಲಿ ಅಕ್ಷರ ಕಲಿಕೆಗೆ ಬೇಕಾದ ಪೂರಕ ದಾಖಲೆಗಳನ್ನು ಒದಗಿಸಿಕೊಡ ಲಾಗುವುದು ಎಂದು ಹೇಳಿದರು.

ಇನ್ನೋರ್ವ ಅತಿಥಿಗಳಾಗಿ ಭಾಗವಹಿಸಿದ ಕೇಂದ್ರ ಕಾರಾಗೃಹದ ಸಹಾಯಕ ಅಧೀಕ್ಷಕ ಬಿ ಸುರೇಶ ಮಾತನಾಡುತ್ತ ಬಂದಿ ನಿವಾಸಿಗಳು ಕ್ರಿಯಾತ್ಮಕ ಸಾಕ್ಷರತಾ ಕಾರ್ಯಕ್ರಮ ಅಚ್ಚುಕಟ್ಟಾಗಿ ಜಾರಿಗೆ ತರಬೇಕೆಂದು ಕರೆ ನೀಡಿದರು ಅಲ್ಲದೆ ಸಾಕ್ಷರದ ಶಿಕ್ಷಾ ವಿಶೇಷ ಮಾಫಿ ಯನ್ನು ನೀಡಲಾಗುವುದು ಹಾಗೂ ವಿಚಾರಣಾ ಬಂದಿಗಳಿಗೆ ಅವರ ಉತ್ತಮ ನಡತೆ ಹಾಗೂ ಸಾಕ್ಷರತೆ ಪಡೆದಿರುವ ಬಗ್ಗೆ ನ್ಯಾಯಾಲಯಕ್ಕೆ ಮಾಹಿತಿ ನೀಡಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಕೇಂದ್ರ ಕಾರಾಗೃಹದ ಮುಖ್ಯ ಅಧೀಕ್ಷಕ ಕೆ ಸುರೇಶ್ ಮಾತನಾಡುತ್ತಾ ಅಕ್ಷರದ ಬೀಜ ಬಿತ್ತೋಣ ಬೆಳೆ ಬೆಳೆಯೋಣ ಎಂಬಂತೆ ಜ್ಞಾನಾಮೃತ ತುಂಬುವ ಕಾಯಕಕ್ಕೆ ಅಕ್ಷರದ ಕ್ರಾಂತಿಯನ್ನು ಸಾಕ್ಷರತೆಯಲ್ಲಿ ಹೊಂದಬೇಕಾದರೆ ಬುದ್ಧಿಯನ್ನು ವಿವೇಕದ ಕಡೆಗೆ ಕೊಡಬೇಕು ಹೊರತು ಅವಿವೇಕದ ಕಡೆಯಲ್ಲ ಬುದ್ಧಿಯನ್ನು ಪರಿಶುದ್ಧತೆಯ ಮನಸ್ಸಿನೊಳಗೆ ತೆಗೆದುಕೊಂಡು ಹೋದರೆ ಅಪರಾಧ ಕಡಿಮೆಯಾಗುತ್ತದೆ ಎಂದು ಹೇಳಿದರು.ಕಾರ್ಯಕ್ರಮದಲ್ಲಿ ಸಹಾಯಕ ಅಧೀಕ್ಷಕ ಚನ್ನಪ್ಪ ಯಟಗಲ್, ಜೈಲರ್‌ಗಳಾದ ಸಾಗರ ಪಾಟೀಲ್, ಶ್ರೀಮಂತಗೌಡ ಪಾಟೀಲ್,ಪುಂಡಲೀಕ ಟಿ ಕೆ ಹಾಗೂ ಸಂಸ್ಥೆಯಲ್ಲಿ ಅಧಿಕಾರಿ ಸಿಬ್ಬಂದಿಗಳು ಭಾಗವಹಿಸಿದರು. ಭೀಮಾಶಂಕರ್ ಡಾಂಗೆ ಸ್ವಾಗತಿಸಿದರು ಹಾಗೂ ಸಂಸ್ಥೆಯ ಶಿಕ್ಷಕ ನಾಗರಾಜ್ ಮುಲಗೆ ನಿರೂಪಿಸಿ ಕೊನೆಯಲ್ಲಿ ವಂದಿಸಿದರು.

# ಒಲುಮೆ, ಹೊಂದಾಣಿಕೆಯೇ ಸುಖಿ ದಾಂಪತ್ಯದ ಗುಟ್ಟು: ಡಾ. ಸತ್ಯಂಪೇಟೆ

■ ಉದಯರಶ್ಮಿ ದಿನಪತ್ರಿಕೆ



ಕಲಬುರಗಿ:ಶರಣರ ದೃಷ್ಟಿಯಲ್ಲಿ ದಾಂಪತ್ಯವು ಕೇವಲ ಲೌಕಿಕ ಭೋಗವಲ್ಲ. ಬದಲಿಗೆ ಕಾಯಕ ಮತ್ತು ದಾಸೋಹ ತತ್ವಗಳ ಮೂಲಕ ಆತ್ಮೋದ್ಧಾರ ಮಾಡಿಕೊಳ್ಳುವ ಪವಿತ್ರ ಅನುಬಂಧವಾಗಿದೆ ಎಂದು ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಉಪಾಧ್ಯಕ್ಷ ಡಾ. ಶಿವರಂಜನ ಸತ್ಯಂಪೇಟೆ ಅಭಿಪ್ರಾಯಪಟ್ಟರು.

ಬಸವರಾಜ ಮತ್ತು ಸುಶೀಲಾ ಮೊರಬದ ಅವರ ಮದುವೆಯ ಸುವರ್ಣೋತ್ಸವ ಹಾಗೂ ರಿಷಭ ನ ಲಿಂಗದೀಕ್ಷಾ ಕಾರ್ಯಕ್ರಮ ನಿಮಿತ್ತ ಜಯನಗರದ ಅನುಭವ ಮಂಟಪದಲ್ಲಿ ಬುಧವಾರ ಆಯೋಜಿಸಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ 'ಸತಿ ಪತಿಗಳೊಂದಾದ ಭಕ್ತಿ' ವಿಷಯ ಕುರಿತು ಮಾತನಾಡಿದ ಅವರು, ಗಂಡ-ಹೆಂಡತಿ ಮಧ್ಯೆ ಪ್ರೀತಿ, ಹೊಂದಾಣಿಕೆ, ಸಾಮರಸ್ಯ ಮುಖ್ಯ. ಅವರು 36ರಂತೆ ಇರದೆ ಪರಸ್ಪರ 63ರಂತೆ ಸಂಸಾರ ಸಾಗಿಸಬೇಕು ಎಂದು ಹೇಳಿದರು.

ಸಾನ್ನಿಧ್ಯ ವಹಿಸಿದ್ದ ಬಸವಕಲ್ಯಾಣ ಅನುಭವ ಮಂಟಪದ ಪೂಜ್ಯ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು ಮಾತನಾಡಿದರು. ಕಲಬುರಗಿಯ ಅಕ್ಕ ಮಹಾದೇವಿ ಆಶ್ರಮದ ಪೂಜ್ಯ ಪ್ರಭುಶ್ರೀ ತಾಯಿ ಸಾನ್ನಿಧ್ಯ, ಬಸವ ಕಲ್ಯಾಣ ಗುರುಬಸವ ಯೋಗ ಕೇಂದ್ರದ ಪೂಜ್ಯ ಗಾಯತ್ರಿ ತಾಯಿ ಸಮ್ಮುಖ ವಹಿಸಿದ್ದರು. ಬೀದರ್ ವಚನ ಸಮೂಹ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಅಲ್ಲಮಪ್ರಭು ನಾವದಗೆರೆ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಕಲಬುರಗಿ ಜಿಲ್ಲಾ ಘಟಕದ ಅಧ್ಯಕ್ಷ ಬಾಬುರಾವ ಯಡ್ರಾಮಿ, ಬೀದರ್ ನ ಶರಣ ಚಿಂತಕ ಪ್ರಕಾಶ ಗಂದಿಗುಡೆ, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಕಲಬುರಗಿ ಜಿಲ್ಲಾ ಘಟಕದ ಅಧ್ಯಕ್ಷ ಡಾ. ಮಲ್ಲಿಕಾರ್ಜುನ ವಡ್ಡನಕೇರಿ, ಜಾಗತಿಕ ಲಿಂಗಾಯತ ಮಹಾಸಭಾ ಕಲಬುರಗಿ ಕಲಬುರಗಿ ಜಿಲ್ಲಾ ಘಟಕದ ಅಧ್ಯಕ್ಷ ಆರ್.ಜಿ. ಶೆಟಗಾರ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಕಲಬುರಗಿ ಬಸವ ಸಮಿತಿ ಅಧ್ಯಕ್ಷೆ ಡಾ. ವಿಲಾಸವತಿ ಖೂಬಾ ಉದ್ಘಾಟಿಸಿದರು. ನಗರ ಬಸವ ಕೇಂದ್ರದ ಅಧ್ಯಕ್ಷ ರವೀಂದ್ರ ಶಾಬಾದಿ ಅಧ್ಯಕ್ಷತೆ ವಹಿಸಿದ್ದರು. ಬೀದರ್ ನವರಸ ಕಲಾಲೋಕದ ವೈಜನಾಥ ಸಜ್ಜನಶೆಟ್ಟಿ ವಚನ ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು. ಎಚ್.ಬಿ. ತೀರ್ಥೆ ಸ್ವಾಗತಿಸಿದರು.

ಮಕ್ಕಳಿಗೆ ಉತ್ತಮ ಸಂಸ್ಕಾರ ಮತ್ತು ಸಂಸ್ಕೃತಿ ಕಲಿಸಿಕೊಡುವಲ್ಲಿ ಪಾಲಕರ ಪಾತ್ರ ಬಹಳ ಮಹತ್ವದ್ದಾಗಿದೆ. ಬಸವ ಸಂಸ್ಕೃತಿ ಶ್ರಮ ಸಂಸ್ಕೃತಿಯ ಪ್ರತೀಕವಾಗಿದ್ದು, ಕಾಯಕ- ದಾಸೋಹ ಭಾವ ಬೆಳೆಸಿಕೊಳ್ಳಬೇಕು ಎಂದುಡಾ. ಬಸವಲಿಂಗ ಪಟ್ಟದ್ದೇವರು ಕಿವಿಮಾತು ಹೇಳಿದರು.

# ಶೇ.6ರಷ್ಟು ಒಳ ಮೀಸಲಾತಿ ಜಾರಿಗೆ ಒತ್ತಾಯ:ತೆಗನೂರ

■ ಉದಯರಶ್ಮಿ ದಿನಪತ್ರಿಕೆ

ಕಲಬುರಗಿ:ಮಾದಿಗರು ಸೇರಿದಂತೆ ಮೂಲ ಅಸ್ಪೃಶ್ಯ- ರಿಗೆ ಒಳ ಮೀಸಲಾತಿ ಜಾರಿ ವಿಳಂಬ ಮಾಡುತ್ತಿರುವುದು ಖಂಡನೀಯ. ಎಸ್.ಸಿಗಳಿಗೆ ಇರುವ ಶೇ.15 ಮೀಸಲಾತಿ ಯಲ್ಲಿಯೇ ಶೇ.6 ರಷ್ಟು ಒಳ ಮೀಸಲಾತಿ ಜಾರಿಗೆ ತಂದು ರಾಜ್ಯ ಸರಕಾರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಬೇಕು ಎಂದು ಮಾದಿಗ ಸಮಾಜದ ಯುವ ಮುಖಂಡ ಆನಂದ ತೆಗನೂರ ಅವರು ಮನವಿ ಮಾಡಿಕೊಂಡರು.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು, ಜನಸಂಖ್ಯೆಗೆ ಅನುಗುಣವಾಗಿ ಒಳ ಮೀಸಲಾತಿ ಜಾರಿ ಮಾಡುವಂತೆ ಕಳೆದ 40 ವರ್ಷಗಳಿಂದ ಮಾದಿಗರು ನಿರಂತರ ಹೋರಾಟ ಮಾಡುತ್ತಲೇ ಬಂದಿದ್ದು ಮನವ- ರಿಕೆ ಮಾಡಿಕೊಂಡಿದ್ದ ಹಿಂದಿನ ಬಿಜೆಪಿ ಸರಕಾರದ ಸಿ.ಎಂ ಬಸವರಾಜ ಬೊಮ್ಮಾಯಿ ಅವರು ಒಳ ಮೀಸಲಾತಿ ನೀಡಲು ರಾಜ್ಯ ಸರಕಾರದ ಸಚಿವ ಸಂಪುಟ ಒಪ್ಪಿಗೆ ಮೇರೆಗೆ ಕೇಂದ್ರಕ್ಕೆ ಶಿಫಾರಸ್ಸು ಮಾಡಿದ ನಂತರ ಇದನ್ನು ಕೆಲವರು ವಿರೋಧಿಸಿ ಸುಪ್ರೀಂ ಕೋರ್ಟ್ ದಾವೆ ಹಾಕಿದರು. ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಸುಪ್ರೀಂ ಕೋರ್ಟ್ ತ್ರಿಪೀಠ ಸದಸ್ಯ ಪೀಠ ಒಳ ಮೀಸಲಾತಿ ನೀಡುವಂತೆ ಆದೇಶ ಮಾಡಿತು. ಇದೆಲ್ಲವೂ ಆದ ಮೇಲೆ ನಾಗಮೋಹನ ದಾಸ ವರದಿ ಆಧಾರದ ಮೇಲೆ ಮೀಸಲಾತಿ ಹೆಚ್ಚಳ ಆಧಾರದಲ್ಲಿ ಶೇ.6 ಒಳ ಮೀಸಲಾತಿ ನಿರ್ಣಯ ತಗೆದುಕೊಂಡು ರಾಜ್ಯ ಸರಕಾರ ಆದೇಶ ಪತ್ರ ಹೊರಡಿಸಲಾಯಿತು. ಆದರೆ ಇದರಲ್ಲಿ ಕಾನೂನಿನ ತೊಡಕು ಇಟ್ಟು ಮೀಸಲಾತಿ ಕೊಟ್ಟ ರಾಜ್ಯ ಸರಕಾರದ ದಂದ್ವವನ್ನು ಸುಪ್ರೀಂ ಮೀಸಲಾತಿ ಹೆಚ್ಚಳ ಬಗ್ಗೆ ಪ್ರಶ್ನೆ ಮಾಡಿದೆ. ಇದರಿಂದ ಒಳ ಮೀಸಲಾತಿಗೆ ದೊಡ್ಡ ಕೊಡಲಿ ಏಟು ಬಿದ್ದಿದೆ. ಸಿ.ಎಂ ಸಿದ್ದರಾಮಯ್ಯನವರು ಬಸವಣ್ಣನವರ ತತ್ವ ಆದರ್ಶದಡಿಯಲ್ಲಿ ರಾಜ್ಯದಲ್ಲಿ ಎರಡನೇ ಬಾರಿಗೆ ಸಿ.ಎಂ ಆಗಿದ್ದಾರೆ.

# ಹೊಸ ತಲೆಮಾರಿನ ಕ್ರಾಂತಿಕಾರಕ ಸಾಹಿತಿ ಪಿ.ಲಂಕೇಶ

## ವ್ಯಕ್ತಿ - ವ್ಯಕ್ತಿತ್ವ
(ಸಾಧಕರ ಬದುಕಿನ ಪುಟಗಳು)


■ ಉದಯರಶ್ಮಿ ದಿನಪತ್ರಿಕೆ

ಕನ್ನಡ ಸಾಹಿತ್ಯ ಸಾರಸ್ವತ ಲೋಕದ ದೈತ್ಯ ಪ್ರತಿಭೆ ದೇಸಿ ಪ್ರಜ್ಞೆಯ ಭಾರತೀಯ ಸಂಸ್ಕೃತಿ ಚಿಂತಕ ನವ್ಯ ಸಾಹಿತ್ಯದ ಪ್ರತಿಪಾದಕ ಪಿ ಲಂಕೇಶ ಕರ್ನಾಟಕದ ಪ್ರಬುದ್ಧ ಪ್ರಾಮಾಣಿಕ ಪತ್ರಕರ್ತರು, ಸಾಹಿತಿ, ಕವಿ, ಲೇಖಕ ಮತ್ತು ಕಾದಂಬರಿಕಾರರು.

ತಮ್ಮ ಬರವಣಿಗೆಯ ಮೂಲಕ ಸಮಾಜದಲ್ಲಿ ಸಾಮರಸ್ಯ ಬದಲಾವಣೆ ಕ್ರಾಂತಿಯನ್ನು ತರಬಹುದು ಎಂದು ತೋರಿಸಿ ಕೊಟ್ಟ ಶ್ರೇಷ್ಠ ಕವಿ ವಾಗ್ಮಿ ವಿಮರ್ಶಕ ಮತ್ತು ಚಿಂತಕರು.

ಆಂಗ್ಲ ಮಾಧ್ಯಮ ಶಿಕ್ಷಕರಾದ ಬಿ ಎಂ ಶ್ರೀ ಶಂಕರ ಮೊಕಾಶಿ ಪುಣೇಕರ ಶಾಂತಿನಾಥ ದೇಸಾಯಿ ಚಂಪಾ ಅವರಂತೆ ಪಿ ಲಂಕೇಶ ಒಬ್ಬ ಶ್ರೇಷ್ಠ ಇಂಗ್ಲೀಷ್ ಭಾಷೆ ಪ್ರಾಧ್ಯಾಪಕರು. ಯುವ ಜನರ ಬರವಣಿಗೆ ದಿಕ್ಕನ್ನೇ ಬದಲಾಯಿಸಿದ ಕ್ರಾಂತಿಕಾರ ಲೇಖಕ ಸಾಹಿತಿ.

ಪಾಳ್ಯದ ಲಂಕೇಶ್, ಅಥವಾ ಪಿ. ಲಂಕೇಶ್ ಕನ್ನಡದ ಖ್ಯಾತ ಸಾಹಿತಿಗಳಲ್ಲೊಬ್ಬರು ಹಾಗೂ ಲಂಕೇಶ್ ಪತ್ರಿಕೆಯ ಸ್ಥಾಪಕ ಸಂಪಾದಕರು. ಕವಿ, ಕಥೆಗಾರ, ಕಾದಂಬರಿಕಾರ, ಅಂಕಣಕಾರ, ನಾಟಕಕಾರ, ನಟ, ನಿರ್ದೇಶಕ ಹೀಗೆ ಬಹುಮುಖ ವ್ಯಕ್ತಿತ್ವವನ್ನು ಹೊಂದಿದವರು. ಇದು ಪತ್ರಿಕೋದ್ಯೋಗಿಯಾಗಿ ಹೆಸರು ಮಾಡಿರುವ ಲಂಕೇಶರು ಪ್ರಸಿದ್ಧಿ ಪಡೆದದ್ದು ನಾಟಕಕಾರರಾಗಿ. ನಾಟಕ ಕ್ಷೇತ್ರಕ್ಕೆ ಅವರು ಕೊಟ್ಟಿರುವ ನಾಟಕಗಳು ಅನೇಕ.








ಪಿ.ಲಂಕೇಶ್ ಅವರು ತಾವು ಲೇಖಕ, ಸಂಪಾದಕ, ನಿರ್ಮಾಪಕ, ಕವಿ, ನಾಟಕಕಾರ, ಅಧ್ಯಾಪಕ,ನಟ ಜೊತೆಗೆ ತಾವೊಬ್ಬ ಹೊಸ ತಲೆಮಾರಿನ ಭರವಸೆಯ ಸಾಹಿತಿ ಚಿಂತಕ ಎಂದು ಸಾಧಿಸಿ ತೋರಿಸಿದರು. ಕನ್ನಡ ಸಾಹಿತ್ಯದ ಎಲ್ಲಾ ಪ್ರಕಾರಗಳಲ್ಲಿ ಕೃಷಿ ಮಾಡಿದ ಕನ್ನಡದ ಏಕ ಮೇವ ಸಾಹಿತಿ ಪಿ ಲಂಕೇಶ.


**ಕುಟುಂಬ ವಿವರ**

**ಮಡದಿ ಇಂದಿರಾ ಲಂಕೇಶ್, ಮಕ್ಕಳು ಗೌರಿ ಲಂಕೇಶ್, ಕವಿತಾ ಲಂಕೇಶ್ ಮತ್ತು ಪುತ್ರ ಇಂದ್ರಜಿತ್ ಲಂಕೇಶ್**

**ಜನನ, ವಿದ್ಯಾಭ್ಯಾಸ**

**ಇವರು 8 ಮಾರ್ಚ್ , 1935 ರಂದು ಶಿವಮೊಗ್ಗ ಜಿಲ್ಲೆಯ ಶಿವಮೊಗ್ಗ ತಾಲೂಕಿನ ಕೊನಗವಳ್ಳಿ ಗ್ರಾಮದಲ್ಲಿ ಜನಿಸಿದರು.**

**ಕನ್ನಡದ ಪ್ರಸಿದ್ಧ ಸಾಹಿತಿ ಮತ್ತು ಪತ್ರಕರ್ತ ಪಿ. ಲಂಕೇಶ್ ಅವರ ತಂದೆ ಪಿ. ಮಾರಪ್ಪ ಮತ್ತು ತಾಯಿ ಗುರುಬಸಮ್ಮ.**




**ಶಿಕ್ಷಣ** ಶಿವಮೊಗ್ಗದಲ್ಲಿ ಪ್ರೌಢಶಾಲೆ ಹಾಗೂ ಇಂಟರ್ ಮೀಡಿಯೇಟ್ (ಸಹ್ಯಾದ್ರಿ ಕಾಲೇಜ್) ಓದಿದರು. ಬೆಂಗಳೂರು ಸೆಂಟ್ರಲ್ ಕಾಲೇಜಿನಿಂದ ಬಿ.ಎ. ( ಆನರ್ಸ್ ) ಪದವಿಯನ್ನು ಹಾಗು ಮೈಸೂರು ವಿಶ್ವವಿದ್ಯಾಲಯದಿಂದ ಎಂ.ಎ. (ಇಂಗ್ಲಿಷ್) ಪದವಿಯನ್ನು ಪಡೆದರು. ವೃತ್ತಿ ಜೀವನ

ಶಿವಮೊಗ್ಗ ಸಹ್ಯಾದ್ರಿ ಕಾಲೇಜಿನಲ್ಲಿ ಆಂಗ್ಲ ಭಾಷೆಯ ಅಧ್ಯಾಪಕರಾಗಿ 1959ರಲ್ಲಿ ವೃತ್ತಿಜೀವನ ಪ್ರಾರಂಭಿಸಿದರು. 1962ರ ವರೆಗೆ ಅಲ್ಲಿಯೇ ಮುಂದುವರೆಸಿರಿದರು.

1962 ರಿಂದ 1965ರವರೆಗೆ ಬೆಂಗಳೂರು ಸೆಂಟ್ರೆಲ್ ಕಾಲೇಜ್ ಮತ್ತು ಸರ್ಕಾರಿ ಕಾಲೇಜಿನಲ್ಲಿ, 1966ರಿಂದ 1978ರವರೆಗೆ ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಇಂಗ್ಲೀಷ್ ಪ್ರಾಧ್ಯಾಪಕರಾಗಿದ್ದರು.

1979ರ ಸುಮಾರಿಗೆ ಲಂಕೇಶರು ಅಧ್ಯಾಪಕ ವೃತ್ತಿಯನ್ನು ತ್ಯಜಿಸಿ ತಮ್ಮದೆ ಆದ ಲಂಕೇಶ್ ಪತ್ರಿಕೆ ಎಂಬ ವಾರಪತ್ರಿಕೆಯನ್ನು ಪ್ರಾರಂಭಿಸಿದರು. ಇಂದು ಪತ್ರಿಕೋದ್ಯೋಗಿಯಾಗಿ ಹೆಸರು ಮಾಡಿರುವ ಲಂಕೇಶರು ಪ್ರಸಿದ್ಧಿ ಪಡೆದದ್ದು ನಾಟಕಕಾರರಾಗಿ. ನಾಟಕ ಕ್ಷೇತ್ರಕ್ಕೆ ಅವರು ಕೊಟ್ಟಿರುವ ನಾಟಕಗಳು ಅನೇಕ. ಗ್ರೀಕ್ ರಂಗಭೂಮಿಯ ರುದ್ರನಾಟಕ "ಈಡಿಪಸ್" ಕಲಾಕ್ಷೇತ್ರದ ಬಯಲು ರಂಗಭೂಮಿಯಲ್ಲಿ ಅತ್ಯಂತ ಯಶಸ್ವಿಯಾಗಿದ್ದಕ್ಕೆ ಅವರ ಸಮರ್ಥ ಭಾಷಾಂತರವೂ ಒಂದು ಕಾರಣ. ಅಲ್ಲದೆ,ಅವರದೇ ಸ್ವಂತ ನಾಟಕಗಳಾದ "ತೆರೆಗಳು", "ಸಂಕ್ರಾಂತಿ",ಇವು ನಾಟಕ ಸಾಹಿತ್ಯದಲ್ಲಿ ಒಂದು ಮೈಲಿಗಲ್ಲು.ಶ್ರೀಯುತರ ಪ್ರತಿಭೆ ಕೇವಲ ನಾಟಕ ಕ್ಷೇತ್ರಕ್ಕೆ ಮೀಸಲಾದದ್ದಲ್ಲ.

'ಮುಸ್ಸಂಜೆಯ ಕಥಾ ಪ್ರಸಂಗ' ಹಾಗೂ 'ಬಿರಿಕು' ಅವರ ಕಾದಂಬರಿ ಗಳು. "ಬಿರುಕು" ನಾಟಕವೂ ಆಯಿತು ."ಅಕ್ಷರ ಹೊಸ ಕಾವ್ಯ" ಅವರು ಸಂಪಾದಿಸಿದ ಅಧುನಿಕ ಕಾವ್ಯಗಳ ಸಂಕಲನ.

'ಪಲ್ಲವಿ','ಅನುರೂಪ', 'ಎಲ್ಲಿಂದಲೋ ಬಂದವರು' ಇವು ಅವರು ನಿರ್ದೇಶಿಸಿದ ಚಿತ್ರಗಳು.ಯಶಸ್ವಿ ಸಣ್ಣ ಕಥೆಗಳನ್ನು,ಬಿಚ್ಚುಮನಸಿನ ಹಾಗೂ ಮೊನಚಿನ ವಿಮರ್ಶಾ ಲೇಖನಗಳನ್ನು ಲಂಕೇಶರು ಬರೆದಿದ್ದಾರೆ. "ಪಲ್ಲವಿ" ಚಿತ್ರಕ್ಕೆ ರಾಷ್ಟ್ರ ಪ್ರಶಸ್ತಿ ಬಂದಿದೆ. "ಅನುರೂಪ"ಕ್ಕೆಪ್ರಾಂತೀಯ ಪ್ರಶಸ್ತಿ ಲಭಿಸಿದೆ. ಇವರು ಉತ್ತಮಬರಹಗಾರರುಮತ್ತುನಾಟಕಕಾರರು.



ಲಂಕೇಶ್ ಪತ್ರಿಕೆ

ವಿಮರ್ಶೆಗಳು, ಅಂಕಣಗಳು ಮುಂತಾದ ಅನೇಕ ವೈಶಿಷ್ಟ್ಯಗಳನ್ನು ಒಳಗೊಂಡ ಈ ಟ್ಯಾಬ್ಲಾಯ್ಡ್ ವಾರಪತ್ರಿಕೆ ಜನಪ್ರಿಯವಾಯಿತು. ಹೊಸ ಸಾಹಿತಿಗಳ ಸೃಷ್ಟಿಗೆ ಲಂಕೇಶ್ ಪತ್ರಿಕೆ ಕೊಡುಗೆ ನೀಡಿದೆ. ಕನ್ನಡ ಸಾಹಿತ್ಯ ಕ್ಷೇತ್ರದಲ್ಲಿ ಪ್ರೊ ಚಂಪಾ ಪೂರ್ಣ ಚಂದ್ರ ತೇಜಸ್ವಿ ಚಂದ್ರಶೇಖರ ಕಂಬಾರ ಡಾ. ಸಿ ಎಸ್ ದ್ವಾರಕಾನಾಥ್, ರವೀಂದ್ರ ರೇಷ್ಮೆ, ಸಿರೂರು ರೆಡ್ಡಿ, ಪ್ರೊ. ಬಿ ವಿ ವೀರಭದ್ರಪ್ಪ, ಬಿ. ಕೃಷ್ಣಪ್ಪ, ಪುಂಡಲೀಕ ಶೇಠ್, ಕೋಟಗಾನಹಳ್ಳಿ ರಾಮಯ್ಯ, ಅಬ್ದುಲ್ ರಶೀದ್, ನಟರಾಜ್ ಹುಳಿಯಾರ್, ಹೆಚ್.ಎಲ್. ಕೇಶವಮೂರ್ತಿ, ಬಿ.ಚಂದ್ರೇಗೌಡ, ಬಾನು ಮುಸ್ತಾಕ್, ವೈದೇಹಿ, ಸಾರಾ ಅಬೂಬುಕರ್, ಇನ್ನೂ ಅನೇಕರು ಲಂಕೇಶ್ ಪತ್ರಿಕೆಯಲ್ಲಿ ತಮ್ಮ ಸಾಹಿತಿಕ ಕೊಡುಗೆ ನೀಡಿದರು.

ಕೃತಿಗಳುಲಂಕೇಶರ ಮೊದಲ ಕಥಾಸಂಕಲನ ಕೆರೆಯ ನೀರನ್ನು ಕೆರೆಗೆ ಚೆಲ್ಲಿ 1963ರಲ್ಲಿ ಪ್ರಕಟವಾಯಿತು

**ನಾಟಕಗಳು**

**ಬಿರುಕು (1973)**

**ಈಡಿಪಸ್ ಮತ್ತು ಅಂತಿಗೊನೆ (1971)**

**ಗುಣಮುಖ (1993)**

**ನನ್ನ ತಂಗಿಗೊಂದು ಗಂಡು ಕೊಡಿ (1963)**

**ತೆರೆಗಳು (1964)**

**ಟಿ. ಪ್ರಸನ್ನನ ಗೃಹಸ್ಥಾಶ್ರಮ (1964)**

**ಕ್ರಾಂತಿ ಬಂತು ಕ್ರಾಂತಿ (1965)**

**ಸಂಕ್ರಾಂತಿ (1971)**

**ಕಥಾ ಸಂಗ್ರಹ**

**ಕೆರೆಯ ನೀರನ್ನು ಕೆರೆಗೆ ಚೆಲ್ಲಿ 1963**

**ನಾನಲ್ಲ 1970**

**ಉಮಾಪತಿ ಯ ಸ್ಕಾಲರ್ ಶಿಪ್ ಯಾತ್ರೆ 1973**

**ಕಲ್ಲು ಕರಗುವ ಸಮಯ 1990**

**ಉಲ್ಲಂಘನೆ 1996**

**ಮಂಜು ಕವಿದ ಸಂಜೆ 2001**

**ಸಮಗ್ರ ಕಥೆಗಳು (ಸಮಗ್ರ ಸಂಕಲನ)**

**ಕಾದಂಬರಿಗಳು**

**ಬಿರುಕು (1967)**

**ಮುಸ್ಸಂಜೆಯ ಕಥಾಪ್ರಸಂಗ (1978)**

**ಅಕ್ಕ (1991)**

**ಅಂಕಣ ಬರಹಗಳ ಸಂಗ್ರಹ**

**ಪ್ರಸ್ತುತ (1970)**

**ಕಂಡದ್ದು ಕಂಡಹಾಗೆ (1975)**

**ಟೀಕೆ ಟಿಪ್ಪಣಿ – 1 (1997)**

**ಟೀಕೆ ಟಿಪ್ಪಣಿ – 2 (1997)**

**ಟೀಕೆ ಟಿಪ್ಪಣಿ – 3 (2008)**

**ರೂಪಕ ಲೇಖಕರು (2008)**

**ಸಾಹಿತಿ ಸಾಹಿತ್ಯ ವಿಮರ್ಶೆ (2008)**

**ಮರೆಯುವ ಮುನ್ನ – ಸಂಗ್ರಹ 1 (2009)**

**ಈ ನರಕ ಈ ಪುಲಕ (2009)**

**ಮರೆಯುವ ಮುನ್ನ – ಸಂಗ್ರಹ 2 (2010)**

**ಮರೆಯುವ ಮುನ್ನ – ಸಂಗ್ರಹ 3**

**ಮನಕೆ ಕಾರಂಜಿಯ ಸ್ಪರ್ಶ (2010)**

**ಆಟ–ಜೂಜು–ಮೋಜು!**

**ಪಾಂಚಾಲಿ**

**ಕವನ ಸಂಗ್ರಹಗಳು**

**ಬಿಚ್ಚು**

**ನೀಲು ಕಾವ್ಯ – ಸಂಗ್ರಹ 1**

**ನೀಲು ಕಾವ್ಯ – ಸಂಗ್ರಹ 2**

**ನೀಲು ಕಾವ್ಯ – ಸಂಗ್ರಹ 3**

**ಚಿತ್ರ ಸಮೂಹ (ಸಮಗ್ರ ಸಂಕಲನ)**

**ಅಕ್ಷರ ಹೊಸ ಕಾವ್ಯ**

**ಪಾಪದ ಹೂಗಳು**

**ತಲೆಮಾರು**

**ಆತ್ಮಕಥೆ**

**ಹುಳಿ ಮಾವಿನಮರ (ಇದರಲ್ಲಿ ಮಾವಿನ ಮರದ ಜೀವನ ಘಟ್ಟಗಳಂತೆ ತಮ್ಮ ಜೀವನ ಕಥನವನ್ನು ನಿರೂಪಿಸಿದ್ದಾರೆ)**

**ಚಲನಚಿತ್ರ ರಂಗ**

**ನಿರ್ದೇಶಕನಾಗಿ ಪಲ್ಲವಿ, ಚಲನಚಿತ್ರಕ್ಕೆ ಕೇಂದ್ರ ಸರಕಾರದಿಂದ 'ಅತ್ಯುತ್ತಮ ನಿರ್ದೇಶಕ' ಎಂದು ಪ್ರಶಸ್ತಿ ಲಭಿಸಿದೆ.**

**ಅನುರೂಪ**

**ಖಂಡವಿದೆ ಕೊ ಮಾಂಸವಿದೆ ಕೊ**

**ಎಲ್ಲಿಂದಲೊ ಬಂದವರು**

**ಮುಸ್ಸಂಜೆಯ ಕಥಾ ಪ್ರಸಂಗ.**

**ನಟನಾಗಿ ಕಾರ್ಯ**

**ಲಂಕೇಶ್ ಅವರು ಸಂಸ್ಕಾರ ಚಲನಚಿತ್ರದಲ್ಲಿ ನಾರಣಪ್ಪನ ಪಾತ್ರವನ್ನು ಅಭಿನಯಿಸಿದ್ದಾರೆ. ಜೊತೆಗೆ 'ಎಲ್ಲಿಂದಲೋ ಬಂದವರು' ಚಲನಚಿತ್ರದಲ್ಲೂ ನಟಿಸಿದ್ದಾರೆ.**

**ಪ್ರಶಸ್ತಿ/ಪುರಸ್ಕಾರ**

**ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ 1993 – 'ಕಲ್ಲು ಕರಗುವ ಸಮಯ' – ಸಣ್ಣ ಕತೆಗಳ ಸಂಗ್ರಹ**

**ಪಲ್ಲವಿ– ಕನ್ನಡ ಚಲನಚಿತ್ರಕ್ಕೆ ಕೇಂದ್ರ ಸರಕಾರದಿಂದ 'ಅತ್ಯುತ್ತಮ ನಿರ್ದೇಶಕ' ಎಂದು ರಾಷ್ಟ್ರಪ್ರಶಸ್ತಿ ಲಭಿಸಿದೆ (1977).**

**ರಾಜ್ಯ ಸಾಹಿತ್ಯ ಅಕಾಡಮಿ ಪ್ರಶಸ್ತಿ 1986**

**ಬಿ.ಎಚ್. ಶ್ರೀಧರ ಪ್ರಶಸ್ತಿ**

**ರಾಜ್ಯ ನಾಟಕ ಅಕಾಡಮಿ ಪ್ರಶಸ್ತಿ**

**ಆರ್ಯಭಟ ಸಾಹಿತ್ಯ ಪ್ರಶಸ್ತಿ**

ಹೀಗೆ ಕನ್ನಡ ಸಾಹಿತ್ಯದ ಎಲ್ಲಾ ಪ್ರಕಾರಗಳಲ್ಲಿ ಕೃಷಿ ಮಾಡಿ ಪ್ರತಿಯೊಂದು ಕ್ಷೇತ್ರದಲ್ಲಿ ಹೊಸತನವನ್ನು ಮೂಡಿಸಿದ ಭರವಸೆಯ ಪರಿಪೂರ್ಣ ವೈಚಾರಿಕ ನೆಲೆಯಲ್ಲಿ ರೂಪಗೊಂಡ ಸಾಹಿತಿ ಲೇಖಕ ಕವಿ ನಾಟಕಕಾರ ನಿರ್ದೇಶಕ ಮತ್ತು ಪತ್ರಕರ್ತ. ತಮ್ಮ ಜೀವಿತ 64 ವರ್ಷಗಳ ಅವಧಿಯಲ್ಲಿ ನವ್ಯ ಸಾಹಿತ್ಯದ ಅಗ್ರ ಪಂಕ್ತಿಯಲ್ಲಿ ಶೋಭಾಯಮಾನವಾಗಿ ಶಾಶ್ವತವಾಗಿ ವಿರಾಜವಾದ ಅಪ್ಪಟ ದೇಸಿ ಪ್ರಜ್ಞೆಯ ಭಾರತೀಯ ಸಂಸ್ಕೃತಿ ಚಿಂತಕ ಸಾಹಿತಿ ಪಿ ಲಂಕೇಶ ಅವರು 25 ಜನೆವರಿ 2000 ರಂದು ಬಯಲಲ್ಲಿ ಬಯಲಾದರು.

ಲೇಖನ
– ಡಾ.ಶಶಿಕಾಂತ ಪಟ್ಟಣ
ರಾಮದುರ್ಗ – ಪುಣೆ



# ಶ್ರೀರಾಮನ ಭವ್ಯ ಶೋಭಾಯಾತ್ರೆ ಯಶಸ್ವಿ



■ ಉದಯರಶ್ಮಿ ದಿನಪತ್ರಿಕೆ

ಕಲಬುರಗಿ: ಶ್ರೀರಾಮನವಮಿ ಅಂಗವಾಗಿ ನಗರದಲ್ಲಿ ಶ್ರೀರಾಮನ ಮೂರ್ತಿಯ ಭವ್ಯ ಶೋಭಾಯಾತ್ರೆ ಅದ್ದೂರಿಯಾಗಿ ನಡೆಯಿತು.

ನಗರದ ಹೊಸ ಜೇವರ್ಗಿ ರಸ್ತೆಯ ಶ್ರೀ ಕೃಷ್ಣೇಶ್ವರ ದೇವಸ್ಥಾನದಿಂದ ರಾಮಮಂದಿರ ದೇವಸ್ಥಾನದವರೆಗೆ ಕನ್ನಡ ನಾಡು ರಕ್ಷಣಾ ಪಡೆ ವತಿಯಿಂದ ಮೊದಲ ಬಾರಿಗೆ ಆಯೋಜಿಸಲಾದ ಈ ಶೋಭಾಯಾತ್ರೆಯಲ್ಲಿ 7 ಅಡಿ ಎತ್ತರದ ಬೃಹತ್ ಶ್ರೀರಾಮನ ಮೂರ್ತಿ ವಿಶೇಷ ಆಕರ್ಷಣೆಯಾಯಿತು. ಕನ್ನಡ ನಾಡು ರಕ್ಷಣಾ ಪಡೆಯರಾಜ್ಯಕಾರ್ಯದರ್ಶಿಗಳುಹಾಗೂಸಮಾಜ ಸೇವಕ ಗಜಾನಂದ ದೇಶಪಾಂಡೆ ನೇತೃತ್ವದಲ್ಲಿ ನಡೆದ ಶೋಭಾಯಾತ್ರೆಗೆ ಪರಮಪೂಜ್ಯರು ಹಾಗೂ ಗಣ್ಯರು ಶೋಭಾಯಾತ್ರೆಗೆ ಚಾಲನೆ ನೀಡಿದರು.

ಗುರುವಾರ ಸಂಜೆ 5:30ಕ್ಕೆ ಪ್ರಾರಂಭವಾದ ಶೋಭಾಯಾತ್ರೆಗೆ ವಿವಿಧ ವಾದ್ಯಗಳ ನಾದ, ಭಕ್ತರ ಘೋಷಣೆಗಳು ಹಾಗೂ ಸಾಂಪ್ರದಾಯಿಕ ಕಲಾ ತಂಡಗಳ ಪ್ರದರ್ಶನಗಳು ಮತ್ತಷ್ಟು ರಂಗು ತಂದವು. ಈ ಸಂದರ್ಭದಲ್ಲಿ ಕನ್ನಡ ನಾಡು ರಕ್ಷಣಾ ಪಡೆಯ ರಾಜ್ಯಾಧ್ಯಕ್ಷ ಗಂಗಾಧರ ರಾಯಣ್ಣ, ರಾಜ್ಯ ಉಪಾಧ್ಯಕ್ಷ ಡಾ. ಪ್ರಸಾದ ಎಂ. ಪಾಟೀಲ್, ಕಾಂಗ್ರೆಸ್ ಮುಖಂಡ ಅಭಿಷೇಕ್ ಪಾಟೀಲ, ಕನ್ನಡ ನಾಡು ರಕ್ಷಣಾ ಪಡೆ ಜಿಲ್ಲಾ ಅಧ್ಯಕ್ಷ ವಿನೋದ್ ಎಂ ಪಾಟೀಲ್, ಶಿವಕುಮಾರ ಹಿರೇಮಠ, ವಿಶ್ವನಾಥ ಸಾಲಿಮಠ, ಶಶಿಧರ ವಾರದ್, ವಿಶಾಲ ಮುತ್ಯಾ, ಮಲ್ಲಿಕಾರ್ಜುನ ಅವಂಟಿ, ಗುರು ನೆಲೋಗಿ, ಗುರುರಾಜ ಕೊರಳಿ, ಪವನಕುಮಾರ ಸಾವಳಗಿ, ಕಾರ್ತಿಕ ಜಮಾದಾರ, ಶರಣು ಉಪ್ಪಿನಾಯಕ್, ನಾಗರೆಡ್ಡಿ, ಶಕ್ತಿ ಚೌವ್ಹಾಣ, ವಿಶಾಲ್ ಸಂಪತ್, ಮಂಜುನಾಥ ನಾಗಂಟೆ ಸೇರಿದಂತೆ ಜಿಲ್ಲೆಯ ಪರಮಪೂಜ್ಯರು, ರಾಜಕೀಯ ಮುಖಂಡರು ಹಾಗೂ ಭಕ್ತರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.




# ವಿಕಲಚೇತನ ಫಲಾನುಭವಿಗಳಿಗೆ ವಿವಿಧ ಬಗೆಯ62 ಲಕ್ಷ ರೂ. ಮೊತ್ತದ ಸಾಧನ ಸಲಕರಣೆಗಳ ವಿತರಣೆ

■ ಉದಯರಶ್ಮಿ ದಿನಪತ್ರಿಕೆ

ಕಲಬುರಗಿ:ಹೌಸಿಂಗ್ ಆಂಡ್ ಅರ್ಬನ್ ಡೆವಲಪ್‌ಮೆಂಟ್ ಕಾರ್ಪೋರೇಶನ್ ಲಿಮಿಟೆಡ್ (ಊಗಆಅಔ) ಸಂಸ್ಥೆಯ ಸಿ.ಎಸ್.ಆರ್ ಯೋಜನೆಯಡಿ ಅಲಿಂಕೋ (ಂಐಖಒಅಔ) ಘಟಕ ಕಲಬುರಗಿ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಹಾಗೂ ಜಿಲ್ಲಾ ಅಂಗವಿಕಲರ ಪುನರ್ವಸತಿ ಕೇಂದ್ರ (ಆಆಖಅ) ಕಲಬುರಗಿ ಇವುಗಳ ಸಹಯೋಗದೊಂದಿಗೆ ಕಲಬುರಗಿ ಅಲಿಂಕೋ ಘಟಕ ಹಾಗೂ ಡಿ.ಡಿ.ಆರ್.ಸಿ ಕೇಂದ್ರ ಟ್ರಾಮಾ ಕೇರ್ ಸೆಂಟರ್ ನೆಲಮಹಡಿಯಲ್ಲಿ ಗುರುವಾರ ವಿಕಲಚೇತನ ಫಲಾನುಭವಿಗಳಿಗೆ ಹಮ್ಮಿಕೊಳ್ಳಲಾಗಿದ್ದ ಸಾಧನ ಸಲಕರಣೆ ವಿತರಣಾ ಕಾರ್ಯಕ್ರಮಕ್ಕೆ ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ಅವರು ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಕಲಬುರಗಿ ಜಿಲ್ಲೆಯ ವಿವಿಧ ತಾಲೂಕಿನ 104 ವಿಕಲಚೇತನ ಫಲಾನುಭವಿಗಳಿಗೆ ವಿವಿಧ ಬಗೆಯ ಸುಮಾರು 62 ಲಕ್ಷ ಮೊತ್ತದ ಸಾಧನ ಸಲಕರಣೆಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಕಲಬುರಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಸಾಧಿಕ ಹುಸೇನ್ ಖಾನ್, ವೈದ್ಯಕೀಯ ಅಧೀಕ್ಷಕ ಡಾ.ಶಿವಕುಮಾರ.. ಆರ್ ಸೇರಿದಂತೆ ಡಾ. ರಾಜಶೇಖರ ಮಾಲಿಪಾಟೀಲ್, ಡಾ. ನಿಶ್ಯಾಂತ ಪಾಣಿಗಾಂವ, ಡಿಡಿಆರ್‌ಸಿ ಕಾರ್ಯದರ್ಶಿ ಅಬ್ದುಲ್ ವಾಹಿದ್ ಮುನೀರ್, ಅಲಿಂಕೋ ಸಂಸ್ಥೆಯ ಸಿಬ್ಬಂದಿ ಅಭಿಷೆಕಕುಮಾರ ಆನಂದ ಮತ್ತು ಡಿ.ಡಿ.ಆರ್.ಸಿ ಕಚೇರಿಯ ಸಿಬ್ಬಂದಿಗಳು ವಿಕಲಚೇತನ ಕ್ಷೇತ್ರದಲ್ಲಿ ಕಾರ್ಯನಿರ್ವಸುತ್ತಿರುವ ಸ್ವಯಂ ಸೇವಾ ಸಂಸ್ಥೆ ಹಾಗೂ ಕಲಬುರಗಿ ಜಿಲ್ಲೆಯ ವಿವಿಧ ತಾಲೂಕಿನ ಎಂ.ಆರ್.ಡಬ್ಲ್ಯೂ ಅವರು ಉಪಸ್ಥಿತರಿದ್ದರು.

# ಡಾ. ಗುರಮ್ಮಾ ಸಿದ್ಧಾರೆಡ್ಡಿ ರವರಿಗೆ ಗೌರವ ಅಭಿನಂದನಾ ಸಮಾರಂಭ

■ ಉದಯರಶ್ಮಿ ದಿನಪತ್ರಿಕೆ



ಬೀದರ:ನಗರದ ಸಿದ್ಧಶ್ರೀ ನಿವಾಸದಲ್ಲಿ ರಾಜ್ಯ ಮಟ್ಟದ ಮಹಿಳಾ ಸಮ್ಮೇಳನ ಪ್ರಥಮ ಸರ್ವಾಧ್ಯಕ್ಷರಾಗಿ ಆಯ್ಕೆಯಾಗಿ ಸಮ್ಮೇಳನವನ್ನು ಯಶಸ್ವಿಗೊಳಿಸಿರುವ ಡಾ॥ ಗುರಮ್ಮಾ ಸಿದ್ಧಾರೆಡ್ಡಿ ರವರ ಗೌರವ ಅಭಿನಂದನಾ ಸಮಾರಂಭ ಜರುಗಿತು.

ಬೆಂಗಳೂರಿನಲ್ಲಿ ದಿನಾಂಕ 14/03/2026 ರಂದು ಕರ್ನಾಟಕ ವಚನ ಸಾಹಿತ್ಯ ಪರಿಷತ್ತು ಬೆಂಗಳೂರು ವತಿಯಿಂದ ಆಯೋಜಿಸಿರುವ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ರಾಜ್ಯ ಮಟ್ಟದ ಪ್ರಥಮ ಮಹಿಳಾ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಬೀದರ ಜಿಲ್ಲೆಯ ಸಮಾಜ ಸೇವಕಿ, ನೊಂದ ಮಹಿಳೆಯರ ಆಶಾ ಕಿರಣ ಡಾ॥ ಗುರಮ್ಮಾ ಸಿದ್ಧಾರೆಡ್ಡಿ ಅವರು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಮತ್ತು ಮಹಿಳಾ ಸಮ್ಮೇಳನವನ್ನು ಅದ್ದೂರಿಯಾಗಿ ಯಶಸ್ವಿಗೊಳಿಸಿರುವ ಪ್ರಯುಕ್ತ ಜಿಲ್ಲಾ ಹಾಗೂ ತಾಲೂಕಾ ಕರ್ನಾಟಕ ವಚನ ಸಾಹಿತ್ಯ ಪರಿಷತ್ತು ವತಿಯಿಂದ ಡಾ॥ ಗುರಮ್ಮಾ ಸಿದ್ಧಾರೆಡ್ಡಿ ರವರನ್ನು ಗೌರವಿಸಲಾಯಿತು.

ಗೌರವ ಸ್ವೀಕರಿಸಿ, ಡಾ॥ ಗುರಮ್ಮಾ ಸಿದ್ಧಾರೆಡ್ಡಿ ರವರು ಮಾತನಾಡುತ್ತಾ, 12ನೇ ಶತಮಾನದಲ್ಲಿ ಬಸವಣ್ಣನವರು ಮತ್ತು ಬಸವಾದಿ ಶರಣರು ಮಹಿಳೆಗೆ ಸ್ವಾತಂತ್ರ??ತೆ ಮತ್ತು ಸಮಾನತೆ ನೀಡಿದ್ದು ಐತಿಹಾಸಿಕವಾಗಿದೆ, ಇಂದು ಮಹಿಳೆಯು ಎಲ್ಲಾ ಕ್ಷೇತ್ರಗಳಲ್ಲಿ ತನ್ನ ಪ್ರತಿಭೆ ವ್ಯಕ್ತಿತ್ವವನ್ನು ಬೀರುತ್ತಿದ್ದಾರೆ. ಆಕೆಯೂ ಪುರಷನ ಸರಿಸಮಾನವಾಗಿ ಸೇವೆ ಮಾಡುತ್ತಿದ್ದಾಳೆ, ಮಹಿಳೆಯು ಸಮಾಜದ ಪ್ರಗತಿಯಲ್ಲಿ ಪ್ರಮುಖ ಪಾತ್ರ ವಹಿಸಲು ವಿಶ್ವಗುರು ಬಸವಣ್ಣನವರೇ ಕಾರಣರಾಗಿದ್ದಾರೆ ಎಂದರು.

ಬೀದರ ಜಿಲ್ಲಾ ಕರ್ನಾಟಕ ವಚನ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಸುನೀತಾ ದಾಡಗೆ ರವರು ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ, ಡಾ॥ ಗುರಮ್ಮಾ ಸಿದ್ಧಾರೆಡ್ಡಿ ಅವರು ಬಡವರ, ದೀನ–ದಲಿತರ, ಸ್ತ್ರೀಯರ ಕಷ್ಟವನ್ನು ಅರಿತು ಸಹಾಯ ಸಹಕಾರ ಮಾಡುವ ಒಬ್ಬ ದಾಸೋಹಿಗಳಾಗಿದ್ದಾರೆ. ಅವರನ್ನು ರಾಜ್ಯ ಮಟ್ಟದ ಮಹಿಳಾ ಸಮ್ಮೇಳನದ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿದ್ದು ಸಂತಸದ ವಿಷಯವಾಗಿದೆ, ಮತ್ತು ಬೀದರ ಜಿಲ್ಲೆಗೆ ದೊರೆತ ಕೀರ್ತಿ ಎಂದು ಹೇಳಿದರು. ರಾಜ್ಯ ಮಟ್ಟದ ಮಹಿಳಾ ಸಮ್ಮೇಳನದಲ್ಲಿ ಬೀದರ ಜಿಲ್ಲೆಯ ಸರ್ಕಾರಿ ಪ್ರಾಥಮಿಕ ಶಾಲೆ ಚಿಟ್ಟಾದ ಶಿಕ್ಷಕಿಯಾದ ಶಕುಂತಲಾ ಮೀಸೆ ಅವರಿಗೆ ಸಾವಿತ್ರಿಬಾಯಿ ಫುಲೇ ಪ್ರಶಸ್ತಿ ಪ್ರಧಾನ ಮಾಡಿ ಗೌರವಿಸಲಾಯಿತು. ವರ್ಷಾ ಬಿರಾದಾರ ವಚನ ಗಾಯನ ನಡೆಸಿಕೊಟ್ಟರು. ತಾಲೂಕಾ ಅಧ್ಯಕ್ಷರಾದ ಶ್ರೀನಿವಾಸ ಬಿರಾದಾರ ಸ್ವಾಗತ ಮತ್ತು ಪ್ರಾಸ್ತಾವಿಕ ಮಾತನಾಡಿದರು. ಬಸವರಾಜ ಮೂಲಗೆ ರವರು ನಿರೂಪಿಸಿದರು. ಕಲ್ಯಾಣರಾವ ಚಳಕಾಪೂರೆ ವಂದಿಸಿದರು. ಜಿಲ್ಲಾ ವಚನ ಸಾಹಿತ್ಯ ಪರಿಷತ್ತಿನ ಕೋಶಾಧ್ಯಕ್ಷರಾದ ಪ್ರೊ. ಉಮಾಕಾಂತ ಮೀಸೆ, ಸಂಘಟನಾ ಕಾರ್ಯದರ್ಶಿಗಳಾದ ಶೈಲಜಾ ಚಳಕಾಪೂರೆ, ಉಪಾಧ್ಯಕ್ಷರಾದ ಪುಣ್ಯವತಿ ವಿಸಾಜಿ, ತಾಲೂಕಾ ಕಾರ್ಯದರ್ಶಿಗಳಾದ ರೋಹಿತ ಜಿರೋಬೆ, ಸಲಹೆಗಾರರಾದ ಭಾರತಿ ಪಾಟೀಲ್, ಲಕ್ಷ್ಮಿ ಬಿರಾದಾರ, ಹೇಮಲತಾ ವೀರಶೆಟ್ಟೆ, ಪ್ರಮುಖರಾದ ಭಾರತಿ ವಸ್ತ್ರದ, ದಿಲೀಪ ಬಿರಾದಾರ, ಉಮೇಶ ಅಷ್ಟೂರೆ, ನಂದಾ ಪಾಟೀಲ್, ರಾಚಯ್ಯಾ ನಾಶಿ, ಅಶೋಕ ಮಾಳೆಗಾಂವ, ರಮೇಶ ತಿಬ್ಬಶೆಟ್ಟಿ, ಬಸವರಾಜ ಬಿರಾದಾರ, ಗುರುನಾಥ ಬಿರಾದಾರ ಮುಂತಾದವರು ಭಾಗವಹಿಸಿದ್ದರು.

# ಡಾ.ಬಾಬು ಜಗಜೀವನರಾಂ ಜಯಂತಿಅರ್ಥಪೂರ್ಣವಾಗಿ ಆಚರಿಸೋಣ:ಎಡಿಸಿ ಶಿವಾನಂದ ಬಿ.ಕರಾಳೆ



■ ಉದಯರಶ್ಮಿ ದಿನಪತ್ರಿಕೆ

ಬೀದರ : ಏಪ್ರಿಲ್.5 ರಂದು ಹಸಿರು ಕ್ರಾಂತಿ ಹರಿಕಾರ ಡಾ.ಬಾಬು ಜಗಜೀವನರಾಂ ಅವರ 119ನೇ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸೋಣ ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಬಿ.ಕರಾಳೆ ತಿಳಿಸಿದರು.

ಅವರು ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಸಿರು ಕ್ರಾಂತಿ ಹರಿಕಾರ ಡಾ.ಬಾಬು ಜಗಜೀವನರಾಂ ಅವರ 119ನೇ ಜಯಂತಿ ಕುರಿತು ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಅಂದು ಬೆಳಿಗ್ಗೆ 9.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಡಾ.ಬಾಬು ಜಗಜೀವನರಾಂ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ನಂತರ 10 ಗಂಟೆಗೆ ಡಾ.ಬಾಬು ಜಗಜೀವನರಾಂ ಅವರ ಪ್ರತಿಮೆಯಿಂದ ಭಾವಚಿತ್ರದ ಮೆರವಣಿಗೆ ಪ್ರಾರಂಭಗೊಂಡು ನಗರದ ಬಸವೇಶ್ವರ ವೃತ್ತ, ಭಗತಸಿಂಗ ವೃತ್ತ, ಅಂಬೇಡ್ಕರ ವೃತ್ತ, ಕರಿಯಪ್ಪ ವೃತ್ತ ಮಾರ್ಗವಾಗಿ ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ 11 ಗಂಟೆಗೆ ವೇದಿಕೆ ಕಾರ್ಯಕ್ರಮ ನಡೆಯುವುದು ಎಂದರು.

ಅಂದು ನಗರದ ಎಲ್ಲ ಮಹನೀಯರ ವೃತ್ತಗಳಿಗೆ ದೀಪಾಲಂಕಾರ ಮಾಡುವುದು, ಎಲ್ಲ ಗ್ರಾಮ ಪಂಚಾಯತಗಳಲ್ಲಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವುದು. ಮೆರವಣಿಗೆ ನಡೆಯುವ ಸ್ಥಳಗಳಲ್ಲಿ ಸ್ವಚ್ಚತೆ, ಕುಡಿಯುವ ನೀರಿನ ವ್ಯವಸ್ಥೆ ನಗರಸಭೆ ವತಿಯಿಂದ ಮಾಡುವುದು. ಪೊಲೀಸ್ ಇಲಾಖೆ ವತಿಯಿಂದ ಮೆರವಣಿಗೆ ಹೋಗುವ ಸ್ಥಳಗಳಲ್ಲಿ ಪೊಲೀಸ್ ಬಂದೋಬಸ್ತ, ಕನ್ನಡ ಸಂಸ್ಕೃತಿ ಇಲಾಖೆ ವತಿಯಿಂದ ಕಲಾ ತಂಡಗಳನ್ನು ನೀಡಲು ವ್ಯವಸ್ಥೆ ಮಾಡಬೇಕೆಂದರು.

ಈ ಸಭೆಯಲ್ಲಿ ಸಮಾಜದ ಮುಖಂಡರು ವಿವಿಧ ವಿಷಯಗಳ ಕುರಿತು ಚರ್ಚಿಸಿದರು.

ಸಭೆಯಲ್ಲಿ ಬೀದರ ಮಹಾನಗರ ಪಾಲಿಕೆ ಆಯುಕ್ತರಾದ ಮುಕುಲ್ ಜೈನ್, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿಗಳಾದ ಶರಣಪ್ಪಾ ಕೋಟಪ್ಪಗೋಳ, ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ ಯೋಗೇಶ, ಜಿಲ್ಲಾ ಮಟ್ಟದ ಅಧಿಕಾರಿಗಳು ಸೇರಿದಂತೆ ಸಮಾಜದ ಮುಖಂಡರಾದ ಚಂದ್ರಕಾಂತ ಹಿಪ್ಪಳಗಾಂವ, ರಾಜು ಕಡ್ಯಾಳ, ಫರ್ನಾಡಿಸ್ ಹಿಪ್ಪಳಗಾಂವ, ಜಾಪಟ್ ಕಡ್ಯಾಳ, ಜಯಶೀಲ ಮಿರಾಗಂಜ್, ಮಾರುತಿ ಶಾಖಾ, ರೋಹಿದಾಸ ಗೋಡೆ, ಸಂಘ ಸಂಸ್ಥೆಗಳು ಮುಖಂಡರು, ಪದಾಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕಲಾಶ್ರೀ ಚವ್ಹಾಣ ಗೆ ಅಭಿನಂದಿಸಿದ ಡಾ. ಸುರೇಖಾ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ದಿನಾಂಕ: 27/03/2026 ರಂದು ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ ಬೆಂಗಳೂರು, 2025ರ ಸಂತ ಸೇವಾಲಾಲ್ ಪ್ರಶಸ್ತಿ, 2025ರ ಗೌರವ ಮತ್ತು ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ವಿಜಯಪುರ ಜಿಲ್ಲೆಯ ಮಹಾಲ್ ಐನಾಪೂರ ತಾಂಡಾ ಎಲ್ ಆರ್ ನಾಯಕ ನಗರದ ಕಲಾಶ್ರೀ ವಸಂತ ಎಲ್ ಚವ್ಹಾಣ ಅವರಿಗೆ 2025ನೇ ಸಾಲೀನ ವಾರ್ಷಿಕ ಪ್ರಶಸ್ತಿಯನ್ನು ಪಡೆದಿರುವ ಇವರಿಗೆ ಡಾ.ಸುರೇಖಾ ಜಿ ರಾಠೋಡ, ಸದಸ್ಯರು ಬಂಜಾರಾ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ ಬೆಂಗಳೂರು ಇವರು ಗೌರವಿಸಿ, ಸನ್ಮಾನಿಸಿ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

# ಹಿರಿಯ ಪತ್ರಕರ್ತ ಟಿ.ಕೆ.ಮಲಗೊಂಡಗೆ ಸನ್ಮಾನಿಸಿದ ದಿಂಗಾಲೇಶ್ವರ ಶ್ರೀ



ಉದಯರಶ್ಮಿ ದಿನಪತ್ರಿಕೆ

ಆಲಮೇಲ: ಸಮಾಜದ ಅಂಕುಡೊಂಕುಗಳನ್ನು ತಿದ್ದುವಲ್ಲಿ ಪತ್ರಿಕಾ ರಂಗದ ಪಾತ್ರ ಅತ್ಯಂತ ದೊಡ್ಡದು ಎಂದು ಅಭಿಪ್ರಾಯಪಟ್ಟ ಗದಗ–ಶಿರಹಟ್ಟಿ–ಬಾಳೆಹೊಸೂರ ಸಂಸ್ಥಾನದ ಶ್ರೀ ಫಕೀರ ದಿಂಗಾಲೇಶ್ವರ ಸ್ವಾಮೀಜಿ ಅವರು, 'ಅಪರಾಧಕ್ಕೆ ಸವಾಲು' ಕನ್ನಡ ದಿನಪತ್ರಿಕೆಯ ಸಂಪಾದಕ ಹಾಗೂ ಹಿರಿಯ ಪತ್ರಿಕೋದ್ಯಮಿ ಟಿ. ಕೆ. ಮಲಗೊಂಡ ಅವರನ್ನು ಸನ್ಮಾನಿಸಿ ಆಶೀರ್ವದಿಸಿದರು.

ತಾಲೂಕಿನ ಕಡಣಿ ಗ್ರಾಮದಲ್ಲಿ ಮಾರ್ಚ್ 27ರಂದು ಜರುಗಿದ ಶ್ರೀ ಭೋಗಲಿಂಗೇಶ್ವರ ಜಾತ್ರಾ ಮಹೋತ್ಸವದ ವೇದಿಕೆಯಲ್ಲಿ ಟಿ ಕೆ ಮಲಗೊಂಡ ಅವರ ಸುದೀರ್ಘ ಪತ್ರಿಕಾ ಸೇವೆ ಹಾಗೂ ಸಾಮಾಜಿಕ ಕಾಳಜಿಯನ್ನು ಗುರುತಿಸಿ ಶ್ರೀಗಳು ಶಾಲು ಹೊದಿಸಿ ಗೌರವಿಸಿದರು.

# ಸಚಿವ ಎಂ. ಬಿ. ಪಾಟೀಲ ಅವರ ಪ್ರವಾಸ ವಿವರ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ. ಬಿ. ಪಾಟೀಲ ಅವರು ವಿಜಯಪುರ ಹಾಗೂ ಬಾಗಲಕೋಟ ಜಿಲ್ಲೆಗಳಲ್ಲಿ ದಿ.29 ರವಿವಾರ ಮತ್ತು ದಿ.30 ಸೋಮವಾರ ರಂದು ಪ್ರವಾಸ ಕೈಗೊಳ್ಳಲಿದ್ದಾರೆ.

ದಿ.29, ರವಿವಾರ ಬಾಗಲಕೋಟ ವಿಧಾನಸಭೆ ಉಪಚುನಾವಣೆ ನಿಮಿತ್ತ ಕಾಂಗ್ರೆಸ್ ಅಭ್ಯರ್ಥಿ ಉಮೇಶ ಮೇಟಿ ಅವರ ಪರವಾಗಿ ಪ್ರಚಾರ ಕೈಗೊಳ್ಳಲಿದ್ದಾರೆ.

ಅಂದು ಬೆ.11ಗಂ ನವನಗರ ಜಿಲ್ಲಾ ಕಾಂಗ್ರೆಸ್ ಕಚೇರಿ ಇಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಲಿದ್ದಾರೆ. ಮ.12ಗಂ. ಸೆಕ್ಟರ್ ನಂಬರ್ 27, ಆರ್ಯಭಟ್ ಶಾಲೆ ಹತ್ತಿರ ನವನಗರ ಶರಣಪ್ಪ ಕುದರಿಕನ್ನೂರ ಅವರ ಮನೆಯಲ್ಲಿ ಸಮಾಜ ಮುಖಂಡರ ಸಭೆ ನಡೆಸಲಿದ್ದಾರೆ.

ಮ.1ಗಂ ವಿದ್ಯಾಗಿರಿಯಲ್ಲಿರುವ ಮುತ್ತು ಜೋಳದ ಅವರ ಮನೆಯಲ್ಲಿ ಸಮಾಜ ಮುಖಂಡರ ಸಭೆಯಲ್ಲಿ ಭಾಗವಹಿಸಲಿದ್ದಾರೆ.

ಮ. 3ಗಂ. ಹರಿಪ್ರೀಯಾ ಹೊಟೇಲ ಹತ್ತಿರ, ಎಪಿಎಂಸಿ ಸರ್ಕಲ್ ಹತ್ತಿರದ ಅಬ್ದುಲರಜಾಕ ಬಾಳಿಕಾಯಿ ಅವರ ಮನೆಯಲ್ಲಿ ಸಮಾಜ ಮುಖಂಡರೊಂದಿಗೆ ಸಭೆ ನಡೆಸಲಿದ್ದಾರೆ.

ಮ.4ಗಂ.ಬೆನಕಟ್ಟಿ ಗ್ರಾಮ, ಸಂ.5ಗಂ.ಹಳ್ಳೂರ ಗ್ರಾಮ ಮತ್ತು ಸಂ.6ಗಂ.ಬೇವೂರ ಗ್ರಾಮಗಳಲ್ಲಿ ಮತಯಾಚಿಸಲಿದ್ದಾರೆ.

ನಂತರ ಎನ್.ಎಚ್ 50 ಆಲಮಟ್ಟಿ–ನಿಡಗುಂದಿ ಮಾರ್ಗವಾಗಿ ಪ್ರಯಾಣಿಸಿ ವಿಜಯಪುರ ವಾಸ್ತವ್ಯ ಮಾಡಲಿದ್ದಾರೆ.

ದಿ.30 ಸೋಮವಾರ ಬೆ.10–11ಗಂ. ವಿಜಯಪುರ ಸಚಿವರ ನಿವಾಸದಲ್ಲಿ ಸಾರ್ವಜನಿಕರ ಕುಂದು ಕೊರತೆ ಆಲಿಸಲಿದ್ದಾರೆ. ಬೆ.11ಗಂ. ಕಂದಗಲ್ ಹಣಮಂತರಾಯ ರಂಗಮಂದಿರದಲ್ಲಿ ಭಗವಾನ್ ಶ್ರೀ ಮಹಾವೀರ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ನಂತರ ಬೆಂಗಳೂರಿಗೆ ಪ್ರಯಾಣಿಸಲಿದ್ದಾರೆ.

# ಹಿಂದಿ ವಿಷಯದಲ್ಲಿ ನಿರ್ಧಾರ ಮರು ಪರಿಶೀಲಿಸಲು ಆಗ್ರಹ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ಹಿಂದಿ ವಿಷಯದಲ್ಲಿ ಶಾಲಾ ಶಿಕ್ಷಣ ಇಲಾಖೆ ತೆಗೆದುಕೊಂಡ ಹೊಸ ನಿಯಮವನ್ನು ದೇಶದ ಏಕತೆ ಹಾಗೂ ದೇಶೀಯ ಭಾಷೆಗಳ ಹಿತರಕ್ಷಣೆಯ ದೃಷ್ಟಿಯಿಂದ ಈ ನಿರ್ಧಾರವನ್ನು ಮರು ಪರಿಶೀಲಿಸಬೇಕು ಎಂದು ಸರ್ವಜ್ಞ ಕರಿಯರ್ ಅಕಾಡೆಮೆ ಸಂಸ್ಥಾಪಕ ಅಧ್ಯಕ್ಷ ನಾಗೇಶ ಹೆಗಡ್ಯಾಳ ಒತ್ತಾಯಿಸಿದರು.

ಶನಿವಾರ ನಗರದ ಖಾಸಗಿ ಹೋಟೆಲ್ ಆವರಣದಲ್ಲಿ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ಎಸ್ಎಸ್ಎಲ್‌ಸಿ ವಿದ್ಯಾರ್ಥಿಗಳಿಗೆ 2026ರ ಪರೀಕ್ಷೆಯಿಂದಲೇ ಅನ್ವಯವಾಗುವಂತೆ ಹಿಂದಿ ಸೇರಿದಂತೆ ತೃತೀಯ ಭಾಷಾ ವಿಷಯಗಳಿಗೆ ಅಂಕ ನೀಡುವ ಪದ್ಧತಿ ಕೈಬಿಟ್ಟು, ಗ್ರೇಡ್ ಎ, ಬಿ, ಸಿ, ಡಿ ಎಂದು ನಮೂದಿಸಲು ಶಾಲಾ ಶಿಕ್ಷಣ ಇಲಾಖೆ ನಿರ್ಧರಿಸಿದೆ. ಹಿಂದಿ ಭಾಷೆಯ ಶಿಕ್ಷಕರ ಭವಿಷ್ಯದ ದೃಷ್ಟಿಯಿಂದ ಹಾಗೂ ಮಕ್ಕಳ ಸರ್ವಾಂಗೀಣ ವಿಕಸನದ ದೃಷ್ಟಿಯಿಂದ ಸರ್ಕಾರವು ಈ ನಿರ್ಧಾರವನ್ನು ಕೈಬಿಡಬೇಕು ಎಂದರು.

ನಮ್ಮ ರಾಜ್ಯದ ಮಕ್ಕಳು ಮುಂದೆ ಐಎಎಸ್, ಐಪಿಎಲ್, ಐಎಫ್–ಎಸ್ ನಂತಹ ದೊಡ್ಡ ಹುದ್ದೆಗಳಿಗೆ ಆಯ್ಕೆಯಾದ ನಂತರ ದೇಶದ ಯಾವುದೇ ಭಾಗದಲ್ಲಿ ಸೇವೆ ಸಲ್ಲಿಸಲು ಹೋದಾಗ ಹಿಂದಿ ಓದಲು, ಬರೆಯಲು, ಮಾತನಾಡಲು ಅಡಚಣೆಯಾಗುತ್ತದೆ ಆ ನಿಟ್ಟಿನಲ್ಲಿ ಸರಕಾರ ಈ ಕುರಿತು ಪರಿಶೀಲಿಸಿ ಕ್ರಮ ಕೈಗೊಳ್ಳಲು ಹೆಗಡ್ಯಾಳ ತಿಳಿಸಿದರು.

# ಗುರುದೇವಿ ಹಳ್ಳೂರ ಗೆ ಪಿ.ಎಚ್.ಡಿ. ಪ್ರದಾನ

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ಶ್ರೀ ಬಸವೇಶ್ವರ ಪದವಿ ಪೂರ್ವ ಮಹಾವಿದ್ಯಾಲಯ ವಿಜಯಪುರದ ಇಂಗ್ಲೀಷ್ ವಿಭಾಗದ ಉಪನ್ಯಾಸಕರಾದ ಶ್ರೀಮತಿ ಗುರುದೇವಿ ಹಳ್ಳೂರ (ನಂದಿನಿ ಮ. ಬಿರಾದಾರ) ಶಿಕ್ಷಣ ಶಾಸ್ತ್ರ ವಿಭಾಗದಲ್ಲಿ ಮಂಡಿಸಿದ ಪ್ರಬಂಧಕ್ಕೆ ಪಿ ಎಚ್ ಡಿ ಪದವಿ ಪ್ರದಾನ ಮಾಡಲಾಗಿದೆ.

ಇವರು ವಿಜಯಪುರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯಕ್ಕೆ ಶಿಕ್ಷಣ ಶಾಸ್ತ್ರವಿಷಯದಲ್ಲಿ "ಎ ಸ್ಟಡಿ ಆಫ್ ಲರ್ನಿಂಗ್ ಟೀಚಿಂಗ್ ಅಂಡ್ ಥಿಂಕಿಂಗ್ ಸ್ಟೈಲ ಆಫ್ ಪ್ರಾಸ್ಪೆಕ್ಟಿವ್ ಟೀಚರ್ಸ್ ಇನ್ನ ರಿಲೇಶನ್ ಟು ದೇಆರ್ ಟೀಚಿಂಗ್ ಕಾಂಪಿಟನ್ಸ" ಎಂಬ ವಿಷಯದ ಮೇಲೆ ಸಂಶೋಧನೆ ನಡೆಸಿ ಸಲ್ಲಿಸಿದ ಮಹಾಪ್ರಬಂಧಕ್ಕೆ ಪಿ ಎಚ್ ಡಿ ಪದವಿ ಪ್ರದಾನ ಮಾಡಲಾಗಿದೆ.

ಇವರಿಗೆ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ ವಿಜಯಪುರದ ಮೌಲ್ಯಮಾಪನ ಕುಲ ಸಚಿವರಾದ ಹಾಗೂ ಶಿಕ್ಷಣ ಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಪ್ರೊ.ಬಿ.ಎಲ್. ಲಕ್ಕಣ್ಣನವರು ಮಾರ್ಗದರ್ಶನ ಮಾಡಿದ್ದರು.

# ಕಳೆದುಹೋದ 110 ಮೊಬೈಲ್‌ಗಳು ವಾರಸುದಾರರ ವಶಕ್ಕೆ

## ಅಥಣಿ ಪೊಲೀಸರ ಭರ್ಜರಿ ಕಾರ್ಯಾಚರಣೆ । ನಿರಂತರ ಕಾರ್ಯಾಚರಣೆಯಿಂದ ಮೊಬೈಲಗಳ ಪತ್ತೆ

■ ಉದಯರಶ್ಮಿ ದಿನಪತ್ರಿಕೆ



ಅಥಣಿ: ಇತ್ತೀಚಿನ ದಿನಗಳಲ್ಲಿ ಸಾರ್ವಜನಿಕರ ದೈನಂದಿನ ಬದುಕಿನ ಅವಿಭಾಜ್ಯ ಅಂಗವಾಗಿರುವ ಮೊಬೈಲ್ ಫೋನ್‌ಗಳು ಕಳೆದುಹೋಗುವ ಪ್ರಕರಣಗಳು ಹೆಚ್ಚಾಗುತ್ತಿವೆ. ಇದನ್ನು ಗಂಭೀರವಾಗಿ ಪರಿಗಣಿಸಿರುವ ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯು, ಅತ್ಯಾಧುನಿಕ ಅಇಖಖ (ಸಿ.ಇ.ಐ.ಆರ್) ಪೋರ್ಟಲ್ ತಂತ್ರಜ್ಞಾನವನ್ನು ಬಳಸಿಕೊಂಡು ಕಳೆದುಹೋದ ಮೊಬೈಲ್‌ಗಳನ್ನು ಪತ್ತೆಹಚ್ಚುವಲ್ಲಿ ಯಶಸ್ವಿಯಾಗಿದೆ.

ಬೆಳಗಾವಿ ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಕೆ. ರಾಮರಾಜನ್ (IPS), ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಆರ್. ಬಿ. ಬಸರಗಿ ಹಾಗೂ ಅಥಣಿ ಉಪವಿಭಾಗದ ಡಿವೈಎಸ್‌ಪಿ ಪ್ರಶಾಂತ್ ಜಿ. ಮುನ್ನೊಳ್ಳಿ ಅವರ ಮಾರ್ಗದರ್ಶನದಲ್ಲಿ ವಿಶೇಷ ತಂಡಗಳನ್ನು ರಚಿಸಲಾಗಿತ್ತು. ಈ ತಂಡಗಳು ಕಳೆದ ಎರಡು ವರ್ಷಗಳಲ್ಲಿ ಕಾಣೆಯಾಗಿದ್ದ ಮೊಬೈಲ್‌ಗಳನ್ನು ಪತ್ತೆಹಚ್ಚಲು ನಿರಂತರ ಕಾರ್ಯಾಚರಣೆ ನಡೆಸಿ ಮೊಬೈಲಗಳನ್ನು ಪತ್ತೆಹಚ್ಚಿ.ದಿನಾಂಕ: 27–03–2026 ರಂದು ಪತ್ತೆಯಾದ 110 ಮೊಬೈಲ್ ಫೋನ್‌ಗಳನ್ನು ಅಥಣಿ ಪೊಲೀಸ್ ಸಮುದಾಯ ಭವನದ ಆವರಣದಲ್ಲಿ ಆಯಾ ವಾರಸುದಾರರಿಗೆ ಹಿಂದಿರುಗಿಸಲಾಗಿದೆ.

ಸಾರ್ವಜನಿಕರ ಆಸ್ತಿಯನ್ನು ರಕ್ಷಿಸುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಕಾರ್ಯಪ್ರವೃತ್ತವಾಗಿದ್ದು, ಪ್ರತಿ ಪೊಲೀಸ್ ಠಾಣಾ ಮಟ್ಟದಲ್ಲಿ ಕಳುವಾದ ಅಥವಾ ಕಳೆದುಹೋದ ಮೊಬೈಲ್‌ಗಳನ್ನು ಪತ್ತೆಹಚ್ಚಲು ಒಬ್ಬ ನುರಿತ ಸಿಬ್ಬಂದಿಯನ್ನು ಪ್ರತ್ಯೇಕವಾಗಿ ನಿಯೋಜಿಸಲಾಗಿದೆ. ಉಳಿದ ಮೊಬೈಲ್‌ಗಳನ್ನು ಪತ್ತೆ ಹಚ್ಚುವ ಪ್ರಕ್ರಿಯೆಯು ತೀವ್ರಗತಿಯಲ್ಲಿ ಮುಂದುವರಿದಿದೆ ಎಂದು ಡಿವೈಎಸ್ಪಿ ಪ್ರಶಾಂತ್ ಮುನ್ನೊಳಿ ತಿಳಿಸಿದ್ದಾರೆ. ತಮ್ಮ ಮೊಬೈಲ್ ಕಳೆದುಕೊಂಡಿದ್ದ ಸಾರ್ವಜನಿಕರು ಇಂದು ತಮ್ಮ ಫೋನ್‌ಗಳನ್ನು ಮರಳಿ ಪಡೆದು ಪೊಲೀಸರ ಕಾರ್ಯಕ್ಷಮತೆಗೆ ಮೆಚ್ಚುಗೆ ವ್ಯಕ್ತಪಡಿಸಿದರು.

### ಠಾಣಾವಾರು ಪತ್ತೆಯಾದ ಮೊಬೈಲ್‌ಗಳ ವಿವರ

* ಅಥಣಿ ಪೊಲೀಸ್ ಠಾಣೆ: 37
* ಐಗಳಿ ಪೊಲೀಸ್ ಠಾಣೆ: 20
* ಕಾಗವಾಡ ಪೊಲೀಸ್ ಠಾಣೆ: 20
* ರಾಯಬಾಗ ಪೊಲೀಸ್ ಠಾಣೆ: 13
* ಹಾರೂಗೇರಿ ಪೊಲೀಸ್ ಠಾಣೆ: 10
* ಕುಡಚಿ ಪೊಲೀಸ್ ಠಾಣೆ: 10

ಈ ವೇಳೆ ಸಿಪಿಐ ಸಂತೋಷ ಹಳ್ಳೂರ, ಸಿಪಿಐ ಮಲ್ಲಿಕಾರ್ಜುನ ಡಪ್ಪಿನ, ಪಿಎಸ್‌ಐ ಗಿರಮಲಪ್ಪ ಉಪ್ಪಾರ, ಐಗಳಿ ಪಿಎಸ್‌ಐ ಚಂದ್ರಶೇಖರ ಸಾಗನೂರ್, ರಾಘವೇಂದ್ರ ಖೋತ, ರಮೇಶ ತೆಲಸಂಗ, ಎಂ. ಎ. ಆಳಂದ, ಸಿಬ್ಬಂದಿಗಳಾದ ಜಮೀರ್ ಡಾಂಗೆ, ಎಸ್. ಎ. ಶೇಕ್, ಅಣ್ಣಪ್ಪ ಹಡಪದ್,ಧರ್ಮೇಂದ್ರ ಶ್ಯಾನವಾಡ, ಸುಧಾಕರ ಸನದಿ, ಧರೆಪ್ಪ ಧರಿಗೌಡರ ಸೇರಿದಂತೆ ಹಲವರು ಸಿಬ್ಬಂದಿ ಉಪಸ್ಥಿತರಿದ್ದರು.

# ಏ.15 ರಿಂದ ಬಸವ ಜಯಂತಿ ಕಾರ್ಯಕ್ರಮ & ಓಲೆಮಠದ ಜಾತ್ರಾ ಮಹೋತ್ಸವ

■ ಉದಯರಶ್ಮಿ ದಿನಪತ್ರಿಕೆ



ಜಮಖಂಡಿ: ನಗರದ ಓಲೆಮಠದ ಆಶ್ರಯದಲ್ಲಿ ಶ್ರದ್ಧಾ ಭಕ್ತಿಯಿಂದ ಅದ್ದೂರಿಯಾಗಿ ಹಾಗೂ ವಿಜೃಂಭಣೆಯಿಂದ ಏಪ್ರಿಲ್ 15 ರಿಂದ 20 ರವರೆಗೆ ಬಸವ ಜಯಂತಿ ಕಾರ್ಯಕ್ರಮ ಮತ್ತು ಓಲೆಮಠದ ಜಾತ್ರಾ ಮಹೋತ್ಸವವನ್ನು ಆಯೋಜಿಸಲು ನಿರ್ಧರಿಸಲಾಗಿದೆ ಎಂದು ಓಲೆಮಠದ ಆನಂದ ದೇವರು ತಿಳಿಸಿದ್ದಾರೆ.

ಓಲೆಮಠದ ಸಭಾಂಗಣದಲ್ಲಿ ಬುಧವಾರ ಸಂಜೆ ವಿವಿಧ ಸಮಾಜಗಳ ಮುಖಂಡರು ಹಾಗೂ ಶ್ರೀಮಠದ ಸದ್ಭಕ್ತರ ಪೂರ್ವಭಾವಿ ಸಭೆ ನಡೆಯಿತು. ಸಭೆಯ ಸಾನ್ನಿಧ್ಯ ವಹಿಸಿ ಎಲ್ಲರ ಸಲಹೆ, ಸೂಚನೆಗಳನ್ನು ಸ್ವೀಕರಿಸಿದ ಬಳಿಕ ಅವರು ಈ ಮಾಹಿತಿ ನೀಡಿದರು.

ಏಪ್ರಿಲ್ 15 ರಿಂದ 19 ರವರೆಗೆ ಪ್ರತಿದಿನ ಒಬ್ಬರಂತೆ ಒಟ್ಟು ಐದು ಮಂದಿ ಹಿರಿಯ ಸಾಹಿತಿಗಳನ್ನು ಆಹ್ವಾನಿಸಿ, ಪ್ರಮುಖ ಪೂಜ್ಯರ ಸಾನ್ನಿಧ್ಯದಲ್ಲಿ ಹಾಗೂ ಗಣ್ಯರ ಸಮ್ಮುಖದಲ್ಲಿ ಬಸವ ತತ್ವದ ವಿವಿಧ ವಿಷಯಗಳ ಕುರಿತು ವಿಶೇಷ ಉಪನ್ಯಾಸಗಳನ್ನು ಹಮ್ಮಿಕೊಳ್ಳಲಾಗುವುದು.

ಈ ಉಪನ್ಯಾಸ ಕಾರ್ಯಕ್ರಮಗಳ ಜವಾಬ್ದಾರಿಯನ್ನು ಸ್ಥಳೀಯ ಬಸವ ಕೇಂದ್ರ ಹಾಗೂ ಬಸವ ಸಮಿತಿ ವಹಿಸಲಿದ್ದು, ಪ್ರತಿದಿನದ ಮಹಾಪ್ರಸಾದ ಹಾಗೂ ಇತರ ಸೇವೆಗಳನ್ನು ವಿವಿಧ ಸಮಾಜಗಳು, ಸಂಘ–ಸಂಸ್ಥೆಗಳು ಮತ್ತು ಗಣ್ಯರು ನಿರ್ವಹಿಸಲಿದ್ದಾರೆ. ಏಪ್ರಿಲ್ 20 ರಂದು ಬೆಳಿಗ್ಗೆ ಬಸವ ಭಾವಚಿತ್ರದ ಭವ್ಯ ಮೆರವಣಿಗೆಯನ್ನು ನಗರದ ಪ್ರಮುಖ ಬೀದಿಗಳಲ್ಲಿ ನಡೆಸಲಾಗುವುದು. ಮೆರವಣಿಗೆಯಲ್ಲಿ ಸಸಿಗಳನ್ನು ಹೊತ್ತ ಸುಮಂಗಲೆಯರು ಭಾಗವಹಿಸಿ 'ಬಸವ ವೃಕ್ಷೋತ್ಸವದ ಮೂಲಕ ಪರಿಸರ ಜಾಗೃತಿ ಮೂಡಿಸಲಿದ್ದಾರೆ.

ಅದೇ ದಿನ ಸಾಯಂಕಾಲ ವಚನ ಕಟ್ಟುಗಳನ್ನು ರಥದಲ್ಲಿ ಇಟ್ಟು ಭವ್ಯ ರಥೋತ್ಸವವನ್ನು ಓಲೆಮಠದಿಂದ ನಡೆಸಲಾಗುತ್ತದೆ. ನಂತರ ಓಲೆಮಠದ ಆವರಣದಲ್ಲಿ ವೇದಿಕೆ ಕಾರ್ಯಕ್ರಮ ಜರುಗಲಿದ್ದು, ವಿದ್ವಾಂಸರು ಭಾಗವಹಿಸಲಿದ್ದಾರೆ ನಾಡಿನ ಪ್ರಮುಖ ಪೂಜ್ಯರು, ಗಣ್ಯರು, ಸಾಹಿತಿಗಳು, ಚಿಂತಕರು ಹಾಗೂ ವಿದ್ವಾಂಸರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

# ಯಡ್ರಾಮಿ ಬಸವೇಶ್ವರ ಜಾತ್ರೆಯ ಅದ್ದೂರಿ ರಥೋತ್ಸವ ಸಂಪನ್ನ

■ ಉದಯರಶ್ಮಿ ದಿನಪತ್ರಿಕೆ




ಯಡ್ರಾಮಿ: ಪಟ್ಟಣದ ಆರಾಧ್ಯ ದೈವ ಬಸವೇಶ್ವರ ಜಾತ್ರೆ ಸಹಸ್ರಾರು ಭಕ್ತರ ಜಯ ಘೋಷಗಳ ನಡುವೆ ಶನಿವಾರ ಸಡಗರ ಸಂಭ್ರಮದಿಂದ ಜರುಗಿತು.

ಸಂಜೆ ಆರು ಗಂಟೆಗೆ ಪಟ್ಟಣದ ವಿರಕ್ತ ಮಠದ ಪರಮ ಪೂಜ್ಯರಾದ ಸಿದ್ದಲಿಂಗ ಮಹಾಸ್ವಾಮಿಗಳು ರಥೋತ್ಸವಕ್ಕೆ ಚಾಲನೆ ನೀಡಿದರು .

ಕಬ್ಬು, ಹೂ, ಬಾಳೆದಿಂಡು, ನಿಶಾನೆಗಳಿಂದ, ಅಲಂಕಾರಗೊಂಡ ರಥವನ್ನು ಎಳೆಯಲು ಚಾಲನೆ ನೀಡುತ್ತಿದ್ದಂತೆ ಭಕ್ತರ ಸಮುದಾಯದಿಂದ ಜಯ ಘೋಷಗಳು ಮುಗಿಲು ಮುಟ್ಟಿತು. ರಥೋತ್ಸವದ ಮಾರ್ಗದುದ್ದಕ್ಕೂ ಭಕ್ತರು ಚಪ್ಪಾಳೆ ಮೂಲಕ ಸಂಭ್ರಮಿಸಿದರು. ಮಾರ್ಗದ ಎರಡು ಬದಿಯಲ್ಲಿ ನಿಂತಿದ ಭಕ್ತರು ರಥಕ್ಕೆ ಉತ್ತತ್ತಿ, ಕೊಬ್ಬರಿ, ಬಾಳೆಹಣ್ಣು ಅರ್ಪಿಸಿ ಭಕ್ತಿ ಮೆರೆದರು.


ರಥವು ಪಾದಗಟ್ಟೆ ತಲುಪುತ್ತಿದ್ದಂತೆ ಭಕ್ತರ ಜಾತ್ರಾ ಸಂಭ್ರಮ ಇಮ್ಮಡಿಗೊಂಡು ಬಸವೇಶ್ವರ ಮಹಾರಾಜಕಿ ಜೈ..ಎನ್ನುವ ಘೋಷಣೆ ಮುಳುಗಿತು. ಜಾತ್ರೆಯ ನಿಮಿತ್ತ ಬೆಳಗಿನಿಂದಲೇ ದೇವಸ್ಥಾನದಲ್ಲಿ ವಿಶೇಷ ಪೂಜೆ, ಅಭಿಷೇಕ, ಆರತಿ, ಸೇರಿದಂತೆ ವಿವಿಧ ಪೂಜೆ ಕಾರ್ಯಗಳು ಸಡಗರದಿಂದ ಜರಗಿದವು. ಭಕ್ತರು ಹೋಳಿಗೆ, ಕಡಬು, ಉಗ್ಗಿ, ಹಾಗೂ ವಿವಿಧ ಬಗೆಯ ಖಾದ್ಯಗಳು ಮಾಡಿ ನೈವೇದ್ಯ ಸಮರ್ಪಿಸಿದರು ಜಾತ್ರೆ ಅಂಗವಾಗಿ ದೇವಸ್ಥಾನಕ್ಕೆ ವಿದ್ಯುತ್ ಅಲಂಕಾರ ಮಾಡಲಾಯಿತು. ಪಟ್ಟಣದ ಹಾಗೂ ತಾಲೂಕಿನ ಸುತ್ತಮುತ್ತಲಿನ ಗ್ರಾಮಗಳ ಸಾವಿರಾರು ಭಕ್ತರು ಬೆಳಗಿನದಲ್ಲಿ ದೇವಸ್ಥಾನಕ್ಕೆ ಆಗಮಿಸಿ, ಬಸವೇಶ್ವರ ದರ್ಶನ ಪಡೆದುಕೊಂಡರು. ಸಂಜೆ ನಡೆದ ಮಹಾ ರಥೋತ್ಸವ ದಲ್ಲಿ ಮಕ್ಕಳು, ಮಹಿಳೆಯರು, ಸೇರಿದಂತೆ ಹೆಚ್ಚಿನ ಸಂಖ್ಯೆಯ ಭಕ್ತರು ಪಾಲ್ಗೊಂಡರು.

ಕಳೆದ 15 ದಿನಗಳ ಕಾಲ ವಿರಕ್ತಮಠದ ಪೂಜ್ಯ ಸಿದ್ಧಲಿಂಗ ಸ್ವಾಮೀಜಿ ಅವರ ಅಮೃತ ವಾಣಿಯಿಂದ ಪುರಾಣ ಕಾರ್ಯಕ್ರಮ ಜರುಗಿತು. ಬಸವೇಶ್ವರ ಜಾತ್ರೆಯಲ್ಲಿ ಅಪಾರ ಭಕ್ತ ಸಮೂಹ ಭಕ್ತಿಯಲ್ಲಿ ಮೆರೆದರು. ಪ್ರತಿ ವರ್ಷ ಯುಗಾದಿಯ 9 ದಿನಗಳ ನಂತರ ಜಾತ್ರೆ ಜರುಗುತ್ತದೆ.

ಹಾಲುಮತದ ಸಮಾಜದವರಿಂದ ಡೊಳ್ಳು ಕುಣಿತ ದೊಂದಿಗೆ ಬೆಳಗಿನ ಜಾವ ಸರ್ಕಾರ ರವರ ಮನೆಯಿಂದ ಕಳಸ, ಹಾಲುಮತದ ಸಮಾಜದ ಮುತ್ತಪ್ಪ ಪೂಜಾರಿ ಶಿವಸೇನಾ ತಾಲೂಕ ಉಪಾಧ್ಯಕ್ಷರು, ಇವರು ಹೊತ್ತುಕೊಂಡು ರಥಕ್ಕೆ ಬಂದು ಕಳಸಾರೋಹಣ ನೆರವೇರಿಸಿದರು. ಮುಖಂಡರಾದ ಎನ್ ಆರ್ ಪಾಟೀಲ, ಚಂದ್ರಶೇಖರ ಪುರಾಣಿಕ, ಮಲ್ಲಿಕಾರ್ಜುನ್ ಹಲಕರ್ಟಿ, ಸಿದ್ದನಗೌಡ ಮಾಲಿಪಾಟೀಲ್, ಅಪ್ಪುಗೌಡ ಮಾಲಿಪಾಟೀಲ್, ಇಬ್ರಾಮ್ ಸಾಬ್ ಉಸ್ತಾದ್, ಮಾನಿಂಗಪ್ಪಗೌಡ ಬಂಡೆಪ್ಪಗೋಳ, ಗುರು ಸಂಗಪ್ಪ ಸಣ್ಣಹಳ್ಳಿ, ಚನ್ನವೀರಪ್ಪ ಗೌಡ ಬಂಡೆಪ್ಪಗೋಳ, ಅಣ್ಣಯ್ಯ ಹಿರೇಮಠ, ಹಯ್ಯಾಳಪ್ಪ ಗಂಗಾಕರ್,ಮಲ್ಲಿಕಾರ್ಜುನ್ ಹೂಗಾರ್, ಈರಣ್ಣ ಸುಂಕದ್, ರಾಚು ತಳವಾರ್, ಭಾಗ್ಯವಂತ ಪವಾರ್, ಗಣೇಶ್ ದೇವರಮನಿ, ರಜಾಕ್ ಮನಿಯರ್,ಅಮರ್ ಕುಸ್ತಿ, ಮಲ್ಲು ಕನಕ, ಮಡಿವಾಳಪ್ಪ ತಳವಾರ್, ಬಸವರಾಜ್ ಪವಾರ್, ಚಿದಾನಂದ ಮುಳ್ಳೋಳ್ಳಿ, ಹಾಗೂ ಸಹಸ್ರಾರು ಭಕ್ತರ ಸಮ್ಮುಖದಲ್ಲಿ ವೈಭವದ ರಥೋತ್ಸವ ಜರುಗಿತು.

# ದೇವನೊಬ್ಬ ನಾಮ ಹಲವು ಸಂದೇಶ ಸಾರಿದ ಸಾಯಿಬಾಬಾ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ದೈವಸ್ವರೂಪಿ ಸಂತ, ಫಕೀರ, ಅವತಾರ ಪುರುಷ ಮತ್ತು ಸದ್ಗುರು ಶ್ರೀ ಸಾಯಿಬಾಬಾ ಅವರು ಜನಹಿತ, ಸಮಾಜ ಕಲ್ಯಾಣಕ್ಕಾಗಿ ಅನೇಕ ಕಷ್ಟ–ಸಂಕಷ್ಟಗಳನ್ನು ಎದುರಿಸಿ, ತಮ್ಮ ಪವಾಡಗಳ ಮೂಲಕ ವಿಶ್ವದೆಲ್ಲೆಡೆ ಆರಾಧಿಸುವ ದೇವರಾದರು. ಅಧ್ಯಾತ್ಮಿಕ ಸಾಧಕರಾಗಿದ್ದ ಶ್ರೀ ಸಾಯಿಬಾಬಾ ಅವರು ದೇವನೊಬ್ಬ ನಾಮ ಹಲವು ಎಂಬ ಸಂದೇಶ ಸಾರುತ್ತಾ, ಭಕ್ತಿಯೋಗ, ಜ್ಞಾನ ಯೋಗ, ಕರ್ಮಯೋಗ ಮತ್ತು ಆತ್ಮ ಸಾಕ್ಷಾತ್ಕಾರಗಳ ಮೂಲಕ ಸರ್ವೇ ಜನಾಃ ಸುಖಿನೋ ಭವಂತು ಎಂಬ ಸಾಮಾಜಿಕ ಕಲ್ಯಾಣಕ್ಕಾಗಿ ಧಾರ್ಮಿಕ ಚಿಂತನೆ ನಡೆಸಿದ ಶ್ರೇಷ್ಠ ಸಂತರಾಗಿದ್ದರು ಎಂದು ಪ್ರೊ. ಎಂ. ಎಸ್.ಖೊದ್ನಾಪೂರ ಅಭಿಪ್ರಾಯಪಟ್ಟರು.

ಅವರು ನಗರದ ಅಥಣಿ ರಸ್ತೆಯಲ್ಲಿರುವ ಅಲ್–ಅಮೀನ್ ಆಸ್ಪತ್ರೆ ಎದುರಿಗೆ ಇರುವ ಎನ್.ಜಿ.ಓ ಕಾಲನಿಯಲ್ಲಿ ರಾಮ ನವಮಿ ಉತ್ಸವದ ಅಂಗವಾಗಿ ಸಾಯಿಬಾಬಾ ದೇವಸ್ಥಾನದಲ್ಲಿ ನಡೆದ ಹೋಮ–ಹವನ, ಮಹಾಪೂಜೆ ಮತ್ತು ಮಹಾಪ್ರಸಾದ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು.

ಅವರು ಮಾತನಾಡುತ್ತಾ, ಶ್ರದ್ಧಾ ಮತ್ತು ಸಬೂರಿ ಎಂಬ ಸಂದೇಶ ಸಾರಿದ ಶ್ರೀ ಸಾಯಿಬಾಬಾ ಇಂದು ವಿಶ್ವದೆಲ್ಲೆಡೆ ಭಕ್ತಿ–ಭಾವದಿಂದ ಪೂಜಿಸುವ ದೇವರಾಗಿದ್ದಾರೆ. ನಮ್ಮಲ್ಲಿರುವ ಕಾಮ, ಕ್ರೋಧ, ಮದ, ಮೋಹ, ಲೋಭ ಮತ್ತು ಮತ್ಸರಗಳೆಂಬ ಅರಿಷಡ್ವರ್ಗಗಳನ್ನು ತ್ಯಜಿಸಿ ಜೀವನದಲ್ಲಿ ಪ್ರೀತಿ, ಶಾಂತಿ, ನೆಮ್ಮದಿ, ಸಮಾನತೆ, ಸಾಮರಸ್ಯತೆ, ಸಂಸ್ಕೃತಿ–ಸಂಸ್ಕಾರ, ಧರ್ಮಸಹಿಂಷ್ಣುತೆ, ನಾವೆಲ್ಲರೂ ಒಂದೇ ಎಂಬ ಭಾವ ಒಡಮೂಡಲು ಧಾರ್ಮಿಕ ಮತ್ತು ಅಧ್ಯಾತ್ಮಿಕತೆಯ ಕಾರ್ಯದಲ್ಲಿ ತೊಡಗಬೇಕು ಎಂದರು.

ಇದೇ ಸಂದರ್ಭದಲ್ಲಿ ಉಮೇಶ ವಂದಾಲ, ಕಾರ್ಪೋರೇಟರ್ ರಾಜಶೇಖರ ಕುರಿ, ಬಸಪ್ಪ ಬಾಗೇವಾಡಿ, ರಾವಸಾಬ ಮೆಣಸಂಗಿ, ಮಡಿವಾಳ ಮಾಕೊಂಡ ಇನ್ನಿತರನ್ನು ಸನ್ಮಾನಿಸಲಾಯಿತು.

ಈ ಸಮಾರಂಭದಲ್ಲಿ ಸಾಯಿಬಾಬಾ ಸೇವಾ ಸಮೀತಿಯ ಸದಸ್ಯರಾದ ಪಂಕಜ ಪೋಳ, ಸಂಪತ್‌ಕುಮಾರ ಕುಲಕರ್ಣಿ, ಅಪ್ಪು ಇಂಗಳೆ, ನಾರಾಯಣ ಇಂಗಳೆ, ಧನರಾಜ ಪೋಳ, ಪ್ರಭು ಬಳೂಲಗಿಡದ, ಶರತ ಬಾಗೇವಾಡಿ, ರಾಜೇಂದ್ರ ಕಬಾಡೆ, ಗೋಲ್ಲಾಳ ಎಚ್ಚಿ, ದೇವಸ್ಥಾನದ ಸಮೀತಿ ಸದಸ್ಯರು ಉಪಸ್ಥಿತರಿದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR